ದಾವಣಗೆರೆ ನಗರವಾಣಿ
ಸುವರ್ಣ ಮಹೋತ್ಸವ ವರ್ಷದಲ್ಲಿ
53 ನೇ ವರ್ಷಕ್ಕೆ ಪಾದಾರ್ಪಣೆ
1973-2025

ದಾವಣಗೆರೆ, ಚಿತ್ರದುರ್ಗ, ಬಳ್ಳಾರಿ, ಹಾವೇರಿ ಜಿಲ್ಲೆಗಳಲ್ಲಿ ಪ್ರಸಾರ ಹೊಂದಿರುವ ಕನ್ನಡ ದೈನಿಕ

# ನಗರವಾಣಿ ದಾವಣಗೆರೆ

ಸಂಸ್ಥಾಪಕ ಸಂಪಾದಕರು: ಸಿ.ಕೇಶವಮೂರ್ತಿ ಪ್ರಧಾನ ಸಂಪಾದಕರು: ಡಾ|| ಸಿ.ಕೆ.ಜಯಂತ್ ಸಹ ಸಂಪಾದಕರು: ಬಿ.ಎನ್.ಮಲ್ಲೇಶ್

ನಗರವಾಣಿ
ವರದಿಗಾರರು ಬೇಕಾಗಿದ್ದಾರೆ
ಕನ್ನಡ ಭಾಷೆಯ ಮೇಲೆ ಪ್ರಭುತ್ವ ಇರುವ, ಪತ್ರಿಕೋದ್ಯಮದಲ್ಲಿ ಅನುಭವ ಇರುವವರು ದಾವಣಗೆರೆ ನಗರವಾಣಿ ಪತ್ರಿಕೆಯಲ್ಲಿ ಕೆಲಸ ಮಾಡಲು ವರದಿಗಾರರಾಗಿ ಬೇಕಾಗಿದ್ದಾರೆ.
ಸಂಜೆ ಮತ್ತು ರಾತ್ರಿ ಕೆಲಸ ಮಾಡುವ ಪುರುಷರಿಗೆ ಆದ್ಯತೆ
ಸಂಪರ್ಕಿಸಿ: 9844060736

ಸಂಪುಟ: 53 ಸಂಚಿಕೆ: 163 DEVANGERE E mail: website: nagaravani.com dngrvani@gmail.com ರಿ.ನಂ.24916/73 KA/SK/DVG -012/2023-25 ಶುಕ್ರವಾರ, ಅಕ್ಟೋಬರ್ 31, 2025 ದೂರವಾಣಿ: 08192-254186 ಬೆಲೆ: 3.00 ರೂ. ಪುಟಗಳು-4

### ಊಹಾಪೋಹಗಳಿಗೆ ಅಂತ್ಯ ಹಾಡಲು ರಾಹುಲ್ ಗಾಂಧಿಗೆ ಆಗ್ರಹ

## ಸಿದ್ದರಾಮಯ್ಯ ಅವರೇ 5 ವರ್ಷ ಸಿಎಂ ಎಂದು ಘೋಷಿಸಿ ರಾಹುಲ್ ಗಾಂಧಿ, ಖರ್ಗೆಗೆ ಅಹಿಂದ ಸಂಘಟನೆಗಳ ಪತ್ರ





ಮೈಸೂರು: ಸಿದ್ದರಾಮಯ್ಯ ಅವರೇ ಐದು ವರ್ಷಗಳ ಅವಧಿಗೆ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸುತ್ತಾರೆ ಎಂದು ಘೋಷಿಸುವಂತೆ ಅಹಿಂದ ಸಂಘಟನೆಗಳು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಒತ್ತಾಯಿಸಿವೆ.

ನಾಯಕತ್ವ ಬದಲಾವಣೆಯ ಕುರಿತಾದ ಊಹಾಪೋಹಗಳಿಗೆ ಅಂತ್ಯ ಹಾಡಲು ತಕ್ಷಣವೇ ಮಧ್ಯಪ್ರವೇಶಿಸುವಂತೆ ಒತ್ತಾಯಿಸಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ವಿವಿಧ ಅಹಿಂದ ಸಂಘಟನೆಗಳ ಪ್ರತಿನಿಧಿಗಳು ಬುಧವಾರ ಪತ್ರಗಳನ್ನು ಬರೆದಿವೆ.

ನವೆಂಬರ್‌ನಲ್ಲಿ ಕಾಂಗ್ರೆಸ್ ಸರ್ಕಾರ ತನ್ನ ಐದು ವರ್ಷಗಳ ಅವಧಿಯ ಅರ್ಧಭಾಗವನ್ನು ತಲುಪಿದಾಗ, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯಾಗಲಿದೆ ಎಂಬ ಊಹಾಪೋಹಗಳ ಹಿನ್ನೆಲೆಯಲ್ಲಿ ಅಹಿಂದಾ ಸಂಘಟನೆಗಳು ನಗರದ ರಾಮಸ್ವಾಮಿ ವೃತ್ತದಲ್ಲಿರುವ ಅಂಚೆ ಪೆಟ್ಟಿಗೆ ಬಳಿಕ ಪತ್ರ ಚಳವಳಿ ನಡೆಸಿದವು.

'2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ಅಹಿಂದ ನಾಯಕ ಸಿದ್ದರಾಮಯ್ಯ ಅವರ ನಾಯಕತ್ವದಲ್ಲಿ 135 ಸ್ಥಾನಗಳನ್ನು ಗೆದ್ದಿತು. ಇದು ಕರ್ನಾಟಕದಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರ ರಚನೆಗೆ ಕಾರಣವಾಯಿತು. ಈ ದೊಡ್ಡ ಮಟ್ಟದ ಗೆಲುವಿಗೆ ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಅಹಿಂದ ಸಮುದಾಯಗಳ ಒಗ್ಗಟ್ಟು ಕಾರಣ' ಎಂದು ಅಹಿಂದ ಸಂಘಟನೆಗಳು ರಾಹುಲ್ ಗಾಂಧಿಗೆ ಬರೆದ ಪತ್ರದಲ್ಲಿ ತಿಳಿಸಿವೆ.

'ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ನೆಲೆ ತುಂಬಾ ಬಲಿಷ್ಠವಾಗಿದ್ದು, ಇದಕ್ಕೆ ಪ್ರಮುಖ ಕಾರಣ ಸಿದ್ದರಾಮಯ್ಯ ಅವರ ಆಡಳಿತ, ಅವರ ಜನಪರ ಖಾತರಿ ಯೋಜನೆ, ಅಹಿಂದ ಸಮುದಾಯಗಳ ಮೇಲಿನ ಅವರ ಪ್ರೀತಿ ಮತ್ತು ಕಾಳಜಿ, ಸಾಮಾಜಿಕ ನ್ಯಾಯದ ಸಿದ್ಧಾಂತ, ಶೋಷಿತ ಸಮುದಾಯಗಳ ಕಲ್ಯಾಣಕ್ಕೆ ಅವರ ಕೊಡುಗೆಗಳು ಮತ್ತು ಎಲ್ಲರಿಗೂ ಸಮಾನತೆಯ ತತ್ವದಲ್ಲಿ ಅವರ ನಂಬಿಕೆ' ಎಂದು ಅದು ಹೇಳಿದೆ.

2023 ರಲ್ಲಿ ಕಾಂಗ್ರೆಸ್ ಶಾಸಕರು ಐದು ವರ್ಷಗಳ ಕಾಲ ಸಿದ್ದರಾಮಯ್ಯ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಿದ್ದಾರೆ. ಆದರೆ, ಬಿಜೆಪಿಯಂತಹ ವಿರೋಧ ಪಕ್ಷಗಳು ಮುಖ್ಯಮಂತ್ರಿಗಳನ್ನು ಬದಲಾಯಿಸಲಾಗುತ್ತದೆ ಎಂಬ ತಪ್ಪು ಹೇಳಿಕೆಗಳ ಮೂಲಕ ಸಾರ್ವಜನಿಕರಲ್ಲಿ ಗೊಂದಲವನ್ನು ಸೃಷ್ಟಿಸುತ್ತಿವೆ. ಕಾಂಗ್ರೆಸ್ ಪಕ್ಷದ ಕೆಲವು ನಾಯಕರು ಕೂಡ ಇದನ್ನು ಪ್ರತಿಧ್ವನಿಸಿದ್ದಾರೆ. ಇದು ಪಕ್ಷದ ಪ್ರಗತಿಗೆ ಅಡ್ಡಿಯಾಗಬಹುದು ಎನ್ನಲಾಗಿದೆ.

### ದಾವಣಗೆರೆ ಸೊಸೆ, ಖ್ಯಾತ ಲೇಖಕಿ ಎಚ್.ಎಲ್.ಪುಷ್ಪಾಗೆ ಪ್ರಶಸ್ತಿ

## 2025ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಪ್ರಕಟ ನಟ ಪ್ರಕಾಶ್ ರಾಜ್ ಸೇರಿ 70 ಮಂದಿ ಆಯ್ಕೆ



ಪ್ರಕಾಶ್ ರಾಜ್



ಎಚ್‌ಎಲ್ ಪುಷ್ಪಾ

ಬೆಂಗಳೂರು: 2025ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಯನ್ನು ಘೋಷಿಸಲಾಗಿದ್ದು, ಚಿತ್ರ ನಟ ಪ್ರಕಾಶ್ ರಾಜ್, ದಾವಣಗೆರೆಯ ಸೊಸೆ, ಖ್ಯಾತ ಲೇಖಕಿ, ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಹೆಚ್.ಎಲ್.ಪುಷ್ಪಾ ಸೇರಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 70 ಮಂದಿಯನ್ನು ಆಯ್ಕೆ ಮಾಡಲಾಗಿದೆ.

ಇದೇ ಮೊದಲ ಬಾರಿಗೆ ಯಾವುದೇ ಅರ್ಜಿ ಆಹ್ವಾನಿಸದೆ ಈ ಆಯ್ಕೆ ನಡೆದಿದೆ. ಜಿಲ್ಲಾವಾರು, ಸಾಮಾಜಿಕ ಪರಿಪಾಲನೆ, ಹಾಗೂ ಆಯ್ಕೆ ಸಮಿತಿ ಶಿಫಾರಸ್ಸುಗಳ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆ ನಡೆದಿದೆ. ಈ ಬಾರಿ 12 ಮಹಿಳೆಯರು ಹಾಗೂ ಸಮಗಾರ ಹರಳಯ್ಯ ಸಮುದಾಯದ ಇಬ್ಬರು ಪ್ರತಿಭೆಗಳು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಆಯ್ಕೆ ಸಲಹಾ ಸಮಿತಿ ಸದಸ್ಯರು ಶಿಫಾರಸ್ಸು ಮಾಡಿದ್ದವರನ್ನು ಬಹುತೇಕ ಆಯ್ಕೆ ಮಾಡಲಾಗಿದ್ದು, ನಾಲ್ಕೈದು ಬಾರಿ ಸಭೆ ನಡೆಸಿದ ಸದಸ್ಯರು ಅರ್ಹರನ್ನು ಆಯ್ಕೆ ಮಾಡಲು ಸಹಕರಿಸಿದ್ದಕ್ಕೆ ಧನ್ಯವಾದಗಳನ್ನು ಈ ಮೂಲಕ ತಿಳಿಸುತ್ತೇನೆ ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದ್ದಾರೆ.

ಇತಿಹಾಸದಲ್ಲೇ ಮೊದಲ ಬಾರಿಗೆ ಸಮಗಾರ ಹರಳಯ್ಯ ಸಮುದಾಯಕ್ಕೆ ಸೇರಿದ ಇಬ್ಬರು ಪ್ರತಿಭೆಗಳನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಈ ಬಾರಿ ಯಾವುದೇ ಸಂಘ-ಸಂಸ್ಥೆಗಳಿಗೆ ಪ್ರಶಸ್ತಿ ನೀಡಿಲ್ಲ. 12 ಮಂದಿ ಮಹಿಳೆಯರಿಗೆ ಈ ಬಾರಿ ಪ್ರಶಸ್ತಿ ಆಯ್ಕೆ ಮಾಡಲಾಗಿದೆ. ಈ ಪೈಕಿ ಕೆಲವರು ಸ್ವಯಂ ಮನವಿ ನೀಡಿದ್ದರು. ಅಂತಹವರು ಪ್ರಶಸ್ತಿಗೆ ಅರ್ಹರಿದ್ದ ಕಾರಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

(3ನೇ ಪುಟಕ್ಕೆ)

## ಮುಖ್ಯಮಂತ್ರಿ ಹುದ್ದೆ ಗುದ್ದಾಟ: ಸಿದ್ದರಾಮಯ್ಯ ಬಣ ಮೇಲುಗೈ, ಉತ್ಸಾಹ ಕಳೆದುಕೊಳ್ಳುತ್ತಿರುವ ಡಿಕೆಶಿ ಬಣ!



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಹುದ್ದೆಯನ್ನು ಉಳಿಸಿಕೊಳ್ಳುವಲ್ಲಿ ದಿನದಿಂದ ದಿನಕ್ಕೆ ಬಲಿಷ್ಠವಾಗುತ್ತಿದ್ದರೆ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಾಯಕತ್ವ ಬದಲಾವಣೆಯ ಬಗ್ಗೆ ಮೌನ ಕಾಯ್ದುಕೊಂಡಿರುವುದರಿಂದ, ಅವರ ಬೆಂಬಲದ ಪಾಳೆಯವು ತನ್ನ ಉತ್ಸಾಹವನ್ನು ಕಳೆದುಕೊಳ್ಳುತ್ತಿರುವಂತೆ ಇತ್ತೀಚೆಗೆ ಕಾಣುತ್ತಿದೆ.

ನವೆಂಬರ್ ಕ್ರಾಂತಿ, ಮುಖ್ಯ ಮಂತ್ರಿ ಹುದ್ದೆಯ ಬದಲಾವಣೆಯ ಊಹಾಪೋಹಗಳ ಮಧ್ಯೆ ಗಾಯದ ಮೇಲೆ ಉಪ್ಪು ಸವರಲು ಎಂಬಂತೆ ದಲಿತ ಸಚಿವರು ರ್ಯಾಲಿ ನಡೆಸಲು ಯೋಜಿಸಿದ್ದಾರೆ. ಅಹಿಂದ ಸಂಘಟನೆಯ ಸದಸ್ಯರು ಸಿದ್ದರಾಮಯ್ಯ ಸಿಎಂ ಆಗಿ ಮುಂದುವರಿಯಬೇಕು ಎಂದು ಹೈಕಮಾಂಡ್‌ಗೆ ಸಂದೇಶ ರವಾನಿಸಲು ಸಹಿ ಅಭಿಯಾನವನ್ನು ಪ್ರಾರಂಭಿಸುತ್ತಿದ್ದಾರೆ.

ಡಿ ಕೆ ಶಿವಕುಮಾರ್ ನಿಷ್ಠರಾಗಿರುವ ಕೆಲವು ಮೊದಲ ಬಾರಿಗೆ ಶಾಸಕರಾದವರು ಸಿದ್ದರಾಮಯ್ಯ ಪಾಳಯವನ್ನು ಎದುರಿಸಲು ಡಿಕೆಶಿಯವರು ತಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಂಡು ಬೆಂಬಲಿಸುತ್ತಿಲ್ಲ ಎಂದು ನಿರಾಶೆಗೊಂಡಿದ್ದಾರೆ. ತಮ್ಮ ಆಪ್ತ ವಲಯದಲ್ಲಿ ಅಸಹಾಯಕತೆಯನ್ನು ವ್ಯಕ್ತಪಡಿಸುತ್ತಿದ್ದಾರೆ (3ನೇ ಪುಟಕ್ಕೆ)

## ಆರೆಸ್ಸೆಸ್ ಪಥಸಂಚಲನದಲ್ಲಿ ಭಾಗಿ; ಪಿಡಿಒ ಅಮಾನತು ಆದೇಶಕ್ಕೆ ತಡೆ

ಬೆಂಗಳೂರು: ಆರ್‌ಎಸ್‌ಎಸ್ ಕಾರ್ಯ ಕ್ರಮದಲ್ಲಿ ಭಾಗವಹಿಸಿದ ಆರೋಪದ ಮೇಲೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ) ಪ್ರವೀಣ್ ಕುಮಾರ್ ಅವರ ಅಮಾನತು ಆದೇಶವನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ (ಕೆಎಸ್‌ಎಟಿ) ಗುರುವಾರ ತಡೆಹಿಡಿದಿದೆ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಹೇಳಿದ್ದಾರೆ.

'ರಾಯಚೂರಿನ ಲಿಂಗಸುಗೂರಿನಲ್ಲಿ ನಡೆದ ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಭಾಗವಹಿಸಿದ್ದಕ್ಕಾಗಿ, ಪಿಡಿಒ ಪ್ರವೀಣ್ ಕುಮಾರ್ ಅವರ ಮೇಲೆ ಹೇರಲಾಗಿದ್ದ ಏಕಪಕ್ಷೀಯ ಅಮಾನತು ಆದೇಶವನ್ನು, ಮಾನ್ಯ ಕೆಎಸ್‌ಎಟಿ ಮುಂದೆ ನಮ್ಮ ಕಚೇರಿಯ ಕಾನೂನು ತಂಡ ಪ್ರಶ್ನಿಸಿತ್ತು. ರಾಜಕೀಯ ಒತ್ತಡದಿಂದ ಮಾಡಲಾಗಿದ್ದ ಅಮಾನತು ಆದೇಶಕ್ಕೆ ಇಂದು ಕೆಎಸ್‌ಎಟಿ ತಡೆ ನೀಡಿದೆ.' ಎಂದು ತೇಜಸ್ವಿ ಸೂರ್ಯ ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. (4ನೇ ಪುಟಕ್ಕೆ)

## ಕೊಟ್ಟೂರು ದೇವಸ್ಥಾನ ಹುಂಡಿ ಎಣಿಕೆ 78 ಲಕ್ಷ ರೂ ದಾಖಲೆ ಮೊತ್ತ ಸಂಗ್ರಹ



ದಾ ನಗರವಾಣಿ ಸುದ್ದಿ

ಕೊಟ್ಟೂರು : ನಾಡಿನ ಆರಾಧ್ಯ ದೈವ ಶ್ರೀ ಗುರುಬಸವೇಶ್ವರ ದೇವಾಲಯದ ಕಾಣಿಕೆ ಹುಂಡಿಗಳಲ್ಲಿ 78,70,030 ಲಕ್ಷ ರೂ ಸಂಗ್ರಹಣೆ ಆಗಿರುತ್ತದೆ ಎಂದು ಧಾರ್ಮಿಕ ಮತ್ತು ದತ್ತಿ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವಸ್ಥಾನದ ಪ್ರಾಂಗಣದಲ್ಲಿ ಬುಧವಾರದಂದು ಆರು ಕಾಣಿಕೆ ಹುಂಡಿಗಳನ್ನು ಭದ್ರತೆಯೊಂದಿಗೆ ತೆರೆದು ಎಣಿಕೆ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಎಣಿಕೆ ಕಾರ್ಯದಲ್ಲಿ ದೇವಸ್ಥಾನದ ಆಯಗಾರ ಬಳಗ, ಕಟ್ಟೆಮನೆ ದೈವದವರು ಶಾಲಾ ಕಾಲೇಜು ವಿದ್ಯಾರ್ಥಿಗಳು, ಸದ್ಭಕ್ತರು ದೇವಸ್ಥಾನದ ಸಕಲ ಸಿಬ್ಬಂದಿಗಳು, ಅಧಿಕಾರಿಗಳು ಹಾಗೂ ಪಟ್ಟಣದ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಿಬ್ಬಂದಿಗಳು ಭಾಗವಹಿಸಿದ್ದರು. ನಂತರ ಕಾಣಿಕೆಯಲ್ಲಿ ಸಂಗ್ರಹವಾದ ಮೊತ್ತವನ್ನು ಬ್ಯಾಂಕಿಗೆ ಜಮಾ ಮಾಡಲಾಯಿತು.

> ಪ್ರತಿ ಮೂರು ತಿಂಗಳಿಗೆ ಒಮ್ಮೆ ಆರು ತಿಂಗಳಿಗೊಮ್ಮೆ ಕೊಟ್ಟೂರೇಶ್ವರ ದೇವಸ್ಥಾನದ ಹುಂಡಿ ಪೆಟ್ಟಿಗೆಯ ಎಣಿಕೆ ಮಾಡಿ ಮೊತ್ತವನ್ನು ತಿಳಿಸುತ್ತಾರೆ. ಆದರೆ ಪ್ರಸ್ತುತ ಇಲ್ಲಿಯವರೆಗೂ ದೇವಸ್ಥಾನಕ್ಕೆ ಸಂಬಂಧಿಸಿದಂತೆ ಭಕ್ತರು ನೀಡಿರುವ ಬೆಳ್ಳಿ ಬಂಗಾರ ಇತರೆ ವಸ್ತುಗಳ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡದೆ ಇರುವುದು ಸಾರ್ವಜನಿಕರಲ್ಲಿ ಅನುಮಾನವಾಗಿದೆ.
>
> – ಎಂ ಶ್ರೀನಿವಾಸ್
> ಕರವೇ ತಾಲ್ಲೂಕು ಅಧ್ಯಕ್ಷ

## ರಾಜ್ಯದಲ್ಲಿ ಆಡಳಿತ ಯಂತ್ರ ಸ್ತಬ್ಧವಾಗಿದೆ ಗೃಹ ಇಲಾಖೆ ಸತ್ತು ಹೋಗಿದೆ: ಜ್ಞಾನೇಂದ್ರ



ದಾ.ನಗರವಾಣಿ ಸುದ್ದಿ

ದಾವಣಗೆರೆ.ಅ.30: ರಾಜ್ಯದಲ್ಲಿ ಆಡಳಿತ ಯಂತ್ರ ಸಂಪೂರ್ಣ ಸ್ಥಬ್ಧಗೊಂಡಿದ್ದು, ಗೃಹ ಇಲಾಖೆ ಸತ್ತು ಹೋಗಿದೆ ಎಂದು ಮಾಜಿ ಗೃಹ ಸಚಿವ ಅರಗ ಜ್ಞಾನೇಂದ್ರ ಆರೋಪಿಸಿದರು.

ಗುರುವಾರ ಸಂಜೆ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರದ ಯಾವ ಇಲಾಖೆಯಲ್ಲೂ ಸಾರ್ವಜನಿಕರ ಕೆಲಸಗಳು ನಡೆಯುತ್ತಿಲ್ಲ. ಜಾತಿ ಗಣತಿಯಿಂದ ಶಿಕ್ಷಕರಿಗೆ ಬಿಡುಗಡೆ ನೀಡಿದ ನಂತರ ಸರ್ಕಾರಿ ಅಧಿಕಾರಿಗಳನ್ನು ಗಣತಿ ಕಾರ್ಯಕ್ಕೆ ನೇಮಿಸಲಾಗಿದೆ. ಹಾಗಾಗಿ ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಸಿಗುತ್ತಿಲ್ಲ. ರಾಜ್ಯದಲ್ಲಿ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಈ ಹಿಂದಿನ ಯಾವ ಸರ್ಕಾರಗಳ ಅವಧಿಯಲ್ಲೂ ಈ ರೀತಿಯ ಪರಿಸ್ಥಿತಿ ಇರಲಿಲ್ಲ ಎಂದರು.

ರಾಜ್ಯದಲ್ಲಿ ಯಾವ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ನೀರಾವರಿ, ಇಂಧನ ಇಲಾಕೆಗಳಲ್ಲಿ ಕೆಲಸ ನಿಂತು ಹೋಗಿವೆ. ಸಾಲ ಮಾಡಿ ಗ್ಯಾರಂಟಿ ಯೋಜನೆಗಳಿಗೆ ಹಣ ನೀಡಲಾಗಿದೆ. ರಸ್ತೆಗಳು ಜನ, ವಾಹನ ಓಡಾಡಲು ಸಾಧ್ಯವಾಗುತ್ತಿಲ್ಲ. ಸರ್ಕಾರಿ ನೌಕರರಿಗೆ ಸಂಬಳ ಕೊಡಲು ಹಣವಿಲ್ಲ. ಹೊರ ಗುತ್ತಿಗೆ ನೌಕರರು, ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಒಂದು ಸರ್ಕಾರ ಎರಡೂವರೆ ವರ್ಷದಲ್ಲಿ ಹತಾಶೆಗೊಂಡು ಏನೂ ಮಾಡದ ಸ್ಥಿತಿಗೆ ತಲುಪಿದೆ ಎಂದರು.

ಸರ್ಕಾರ ಅನಾವಶ್ಯಕ ವಿವಾದಗಳನ್ನು ಹುಟ್ಟು ಹಾಕುತ್ತಿದೆ. ಆರ್‌ಎಸ್‌ಎಸ್ ಪಥ ಸಂಚಲನಗಳನ್ನು ಹತ್ತಿಕ್ಕುವ ಕೆಲಸ ನಡೆಯುತ್ತಿದೆ. (3ನೇ ಪುಟಕ್ಕೆ)

### ಪ್ರಿಯಾಂಕ್ ಖರ್ಗೆ ಅಲ್ಲ, ಪ್ರಚಾರ ಖರ್ಗೆ

> ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಅವರ ಇಲಾಖೆಯಲ್ಲಿ ಏನು ನಡೆಯುತ್ತಿದೆ ಎನ್ನುವುದೇ ರಾಜ್ಯದ ಜನರಿಗೆ ಗೊತ್ತಾಗುತ್ತಿಲ್ಲ. ಅವರ ಇಲಾಖೆಗೆ ನಿಗದಿಪಡಿಸಿದ ಅನುದಾನದಲ್ಲಿ ಒಂದರಲ್ಲಿ ಶೇ.11, ಮತ್ತೊಂದು ಇಲಾಖೆಯಲ್ಲಿ ಶೇ.16 ರಷ್ಟು ಮಾತ್ರ ಅನುದಾನ ಬಳಕೆಯಾಗಿದೆ ಎಂದು ಮಾಧ್ಯಮಗಳಲ್ಲಿಯೇ ವರದಿಯಾಗಿದೆ ಅವರಿಗೆ ಇಲಾಖೆಯ ಮೇಲೆ ಆಸಕ್ತಿಯೇ ಇಲ್ಲ. ಅನುದಾನ ಕೊಡುವುದಿಲ್ಲ ಎನ್ನುವ ಮತ್ತು ಆ ಖಾತೆಯ ಮೇಲೆ ಆಸಕ್ತಿ ಇಲ್ಲದ ವ್ಯಕ್ತಿಯನ್ನು ಮಂತ್ರಿ ಸ್ಥಾನದಲ್ಲಿ ಕೂರಿಸಲಾಗಿದೆ ಅವರು ತಮ್ಮ ಇಲಾಖೆಯನ್ನು ಬಿಟ್ಟು ಇತರೆ ಎಲ್ಲ ಇಲಾಖೆ ಮತ್ತು ವಿಷಯಗಳ ಬಗ್ಗೆ ಅಂತರಾಷ್ಟ್ರೀಯ ಮಾತುಗಳನ್ನು ಆಡುತ್ತಾರೆ. ಆರೆಸ್ಸೆಸ್, ಸಂವಿಧಾನ ಅದು ಇದು ಹೇಳುತ್ತಾ ತಾನೊಬ್ಬ ಹೀರೋ ಆಗಲು ಪ್ರಯತ್ನ ಮಾಡುತ್ತಿದ್ದಾರೆ. ನಿತ್ಯ ಮಾಧ್ಯಮಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಹಾಗಾಗಿ ಅವರು ಪ್ರಿಯಾಂಕ್ ಖರ್ಗೆ ಅಲ್ಲ, ಪ್ರಚಾರ ಖರ್ಗೆ.
>
> –ಅರಗ ಜ್ಞಾನೇಂದ್ರ, ಮಾಜಿ ಗೃಹ ಸಚಿವ

## ಬಿಜೆಪಿ ನಾಯಕರು ರಾತ್ರಿಯಾದರೆ ಡಿಸಿಎಂ ಮನೇಲಿ ನಾಟಿ ಕೋಳಿ ತಿಂತಾರೆ: ಯತ್ನಾಳ್



ಬೆಂಗಳೂರು: ಬಿಜೆಪಿ ನಾಯಕರು ರಾತ್ರಿಯಾದರೆ ಡಿಸಿಎಂ ಡಿಕೆ ಶಿವಕುಮಾರ್ ಮನೆಯಲ್ಲಿ ರಾಗಿ ಮುದ್ದೆ ನಾಟಿ ಕೋಳಿ ತಿನ್ನುತ್ತಾರೆ. ಬೆಳಗ್ಗೆ ಸಿದ್ದರಾಮಯ್ಯ ಮನೆಯಲ್ಲಿ ತಟ್ಟೆ ಇಡ್ಲಿ ತಿನ್ನುತ್ತಿದ್ದರೆ ಪಕ್ಷ ಹೇಗೆ ಉದ್ಧಾರ ಆಗುತ್ತದೆ? ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದರು. ವಿಧಾನಸೌಧದಲ್ಲಿ ಗುರುವಾರ ಮಾತನಾಡಿದ ಅವರು, "ಮೇಲಿನವರು ಸುಮ್ಮನೆ ಕೂತಿದ್ದಾರೆ. ಈಗ ತಾನು ಹೋದರೆ ಸಮಸ್ಯೆ ಆಗುತ್ತದೆ ಎಂದು ಸಿಎಂ ನಿವಾಸಕ್ಕೆ ರವಿಕುಮಾರ್ ಅವರನ್ನು ಕಳುಹಿಸ್ತಿದ್ದಾರೆ. ಅವರು ಸಿಎಂ ಕಾರಲ್ಲೇ ಹೋಗ್ತಾರೆ ಎಂದು ಆರೋಪಿಸಿದರು.

"ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ನಾಪತ್ತೆಯಾಗಿದ್ದಾರೆ. ಬಿಜೆಪಿಯಲ್ಲಿ ಕ್ರಾಂತಿಯಾಗುತ್ತೋ ಅಥವಾ ಶಾಂತಿಯಾಗುತ್ತೋ ಗೊತ್ತಿಲ್ಲ. ಅವರ ರಾಜ್ಯಾಧ್ಯಕ್ಷನೇ ನಾಪತ್ತೆಯಾಗಿದ್ದಾರೆ. ಪೂಜ್ಯ ತಂದೆಯವರ ಕಿರಿಯ ಮಗ ನಾಪತ್ತೆಯಾಗಿದ್ದಾನೆ" ಎಂದು ವ್ಯಂಗ್ಯವಾಗಿ ಟೀಕಿಸಿದರು. ಆರ್ ಎಸ್ ಎಸ್ ಕುರಿತಾಗಿ ಸಚಿವ ಪ್ರಿಯಾಂಕ್ ಖರ್ಗೆ ಇಷ್ಟೊಂದು ಮಾತಾಡುವಾಗ ವಿಜಯೇಂದ್ರ ಅವರು ಮಾತಾಡಬೇಕಿತ್ತಲ್ಲ? ಅವರೂ ಮಾತನಾಡುತ್ತಿಲ್ಲ. ವಿಪಕ್ಷ ನಾಯಕರಾದ ಆರ್ ಅಶೋಕ್ ಕೂಡಾ ಮಾತನಾಡುತ್ತಿಲ್ಲ" ಎಂದರು.

"ಪ್ರಿಯಾಂಕ್ ಖರ್ಗೆ ಅವರು ಆರೆಸ್ಸೆಸ್- ಬಿಜೆಪಿ ವಿರುದ್ಧ ಇಷ್ಟು ಅಟ್ಯಾಕ್ ಮಾಡ್ತಿದ್ದಾರೆ. ಆಶೋಕ್ ಅವರು ಒಂದೆರಡು ಹೇಳಿಕೆ ಕೊಟ್ಟಿದ್ದಾರೆ. ಆದರೆ, ಅದರಲ್ಲಿ ಉಗ್ರ ಹೇಳಿಕೆ ಅನ್ನುವಂಥವು ಯಾವುದೂ ಇಲ್ಲ. ನಾನೊಬ್ಬ ಇದಕ್ಕೆ ಕೌಂಟರ್ ಕೊಡುತ್ತೇನೆ. ಬಿಜೆಪಿಯಲ್ಲಿ ಪ್ರತಾಪ್ ಸಿಂಹ ಒಬ್ಬರು ಮಾತಾಡ್ತಾರಷ್ಟೇ" ಎಂದರು.

ಆರೆಸ್ಸೆಸ್ ಪರೇಡ್ ನಲ್ಲಿ ಭಾಗವಹಿಸಿದ್ದ ಪಿಡಿಓ ಪ್ರವೀಣ್ ಅಮಾನತಿಗೆ ನ್ಯಾಯಾಲಯ ತಡೆಯಾಜ್ಞೆ ನೀಡಿರುವ ವಿಚಾರವಾಗಿ ಮಾತನಾಡಿದ

(3ನೇ ಪುಟಕ್ಕೆ)

## ಮಟ್ಟಣ್ಣನವರ್ ಸೇರಿ 4 ಮಂದಿ ವಿರುದ್ಧದ ಎಫ್‌ಐಆರ್‌ಗೆ 'ಹೈ' ತಡೆಯಾಜ್ಞೆ!

ಬೆಂಗಳೂರು: ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಗಿರೀಶ್ ಮಟ್ಟಣ್ಣನವರ್, ಮಹೇಶ್ ಶೆಟ್ಟಿ ತಿಮರೋಡಿ, ಟಿ. ಜಯಂತ್ ಹಾಗೂ ವಿಠಲಗೌಡ ಅವರ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ವಿಚಾರಣೆಗೆ ನವೆಂಬರ್ 12 ವರೆಗೂ ಕರ್ನಾಟಕ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಮಾತ್ರವಲ್ಲದೇ, ಎಸ್‌ಐಟಿ ಪೊಲೀಸರು ಅಂತಿಮ ವರದಿ ಸಲ್ಲಿಸುವಂತಿಲ್ಲ ಎಂದು ಸೂಚನೆ ನೀಡಿದೆ.

ಪ್ರಕರಣದಲ್ಲಿ ಎಫ್‌ಐಆರ್ ರದ್ದು ಕೋರಿ ಗಿರೀಶ್ ಮಟ್ಟಣ್ಣನವರ್, ಮಹೇಶ್ ಶೆಟ್ಟಿ ತಿಮರೋಡಿ, ಟಿ. ಜಯಂತ್ ಹಾಗೂ ವಿಠಲಗೌಡ ಸೇರಿ ನಾಲ್ವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ನ್ಯಾಯಮೂರ್ತಿ ಮೊಹಮ್ಮದ್ ನವಾಜ್ ಅವರ ಪೀಠ ವಿಚಾರಣೆ ನಡೆಸಿತು. ಈ ಪ್ರಕರಣದ ಮೂಲ ದೂರುದಾರ ಸಿಎನ್ ಚಿನ್ನಯ್ಯ ಅವರ ದೂರಿನ ಮೇರೆಗೆ ತನಿಖೆ ನಡೆಯುತ್ತಿದ್ದು, ಅರ್ಜಿದಾರರು ತಮ್ಮ ವಿರುದ್ಧ ಯಾವುದೇ ಸಾಕ್ಷ್ಯಗಳಿಲ್ಲ ಎಂದು ಕೋರ್ಟ್‌ನ ಗಮನಕ್ಕೆ ತಂದಿದ್ದರು.

ಅರ್ಜಿದಾರರ ಪರ ವಕೀಲ ಬಾಲನ್ ವಾದ ಮಂಡಿಸಿದ್ದು, ನಮ್ಮ ಕಕ್ಷಿದಾರರಿಗೆ ಎಸ್‌ಐಟಿ 9 ಬಾರಿ ನೋಟಿಸ್ ನೀಡಿ ವಿಚಾರಣೆ ನಡೆಸಲಾಗಿದೆ. ಎಫ್‌ಐಆರ್‌ನಲ್ಲಿ ನಮ್ಮನ್ನು ಆರೋಪಿಗಳೆಂದು ಉಲ್ಲೇಖ ಮಾಡಿಲ್ಲ. ಆರಂಭದಲ್ಲಿ 211(ಚಿ) ಅಡಿ ಎಫ್‌ಐಆರ್ ದಾಖಲಿಸಿ ನಂತರ ಬೇರೆ ಸೆಕ್ಷನ್ ಸೇರಿಸಿದ್ದಾರೆ ಎಂದು ಕೋರ್ಟ್‌ನ ಗಮನಕ್ಕೆ ತಂದರು.

ಎಸ್‌ಐಟಿ ಪರ ಬಿ.ಎನ್. ಜಗದೀಶ್ ವಾದ ಮಂಡಿಸಿದ್ದು, ಅರ್ಜಿದಾರರ ಪ್ರಚೋದನೆ ಮೇಲೆಯೇ ಚಿನ್ನಯ್ಯ ದೂರು ನೀಡಿದ್ದಾನೆ. ಆರೋಪಿಗಳನ್ನಾಗಿಸಿ ಇವರಿಗೆ ನೋಟಿಸ್ ನೀಡಲಾಗಿದೆ ಎಂದರು.

## ಮಹಿಳಾ ವಿಶ್ವ ಕಪ್: ಭಾರತ ಫೈನಲ್‌ಗೆ





ಮುಂಬೈ: ಜೆಮಿಮಾ ರೊಡ್ರಿಗಸ್ ಭರ್ಜರಿ ಶತಕ ಹಾಗೂ ಹರ್ಮನ್‌ಪ್ರೀತ್ ಕೌರ್ ಅವರ ಅರ್ಧಶತಕದ ಬಲದಿಂದ ಭಾರತ ತಂಡ, 2025ರ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಟೂರ್ನಿಯ ಸೆಮಿಫೈನಲ್ ಪಂದ್ಯದಲ್ಲಿ ಬಲಿಷ್ಠ ಆಸ್ಟ್ರೇಲಿಯಾ ವಿರುದ್ಧ 5 ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿತು.

ಇದರೊಂದಿಗೆ ಭಾರತ, ಮಹಿಳಾ ಏಕದಿನ ವಿಶ್ವಕಪ್ ಇತಿಹಾಸದಲ್ಲಿ ಮೂರನೇ ಬಾರಿ ಫೈನಲ್‌ಗೆ ಪ್ರವೇಶ ಮಾಡಿತು. ಅಲ್ಲದೆ ಲೀಗ್ ಹಂತದಲ್ಲಿನ ಆಸೀಸ್ ವಿರುದ್ಧದ ಸೋಲಿನ ಸೇಡನ್ನು ಭಾರತೀಯ ವನಿತೆಯರು ತೀರಿಸಿಕೊಂಡರು. ಫೋಬೆ ಲಿಚ್‌ಫೀಲ್ಡ್ ಶತಕದ ಹೊರತಾಗಿಯೂ ಸೋತ ಆಸೀಸ್‌ನ ಎಂಟನೇ ವಿಶ್ವಕಪ್ ಗೆಲ್ಲುವ ಕನಸು ಭಗ್ನವಾಯಿತು.

ಗುರುವಾರ ಇಲ್ಲಿನ ಡಿವೈ ಪಾಟೀಲ್ ಕ್ರಿಕೆಟ್ ಅಕಾಡೆಮಿ ಕ್ರೀಡಾಂಗಣದಲ್ಲಿ ಆಸ್ಟ್ರೇಲಿಯಾ ನೀಡಿದ್ದ 339 ರನ್‌ಗಳ ಕಠಿಣ ಗುರಿಯನ್ನು ಹಿಂಬಾಲಿಸಿದ ಭಾರತ ತಂಡ ಆರಂಭಿಕ ಎರಡು ವಿಕೆಟ್‌ಗಳನ್ನು ಕಳೆದುಕೊಂಡು ಆಘಾತಕ್ಕೆ ಸಿಲುಕಿತ್ತು. ಆದರೆ, ಜೆಮಿಮಾ ರೊಡ್ರಿಗಸ್ (127*) ಹಾಗೂ ಹರ್ಮನ್‌ಪ್ರೀತ್ ಕೌರ್ (89 ರನ್) ಅವರ 167 ರನ್‌ಗಳ ದೊಡ್ಡ ಜೊತೆಯಾಟದ (3ನೇ ಪುಟಕ್ಕೆ)

ನಗರವಾಣಿ ದಾವಣಗೆರೆ
ಅಕೌಂಟೆಂಟ್/ಮ್ಯಾನೇಜರ್ ಬೇಕಾಗಿದ್ದಾರೆ
ದಾವಣಗೆರೆ ನಗರವಾಣಿ ಪತ್ರಿಕೆಯಲ್ಲಿ ಕಾರ್ಯ ನಿರ್ವಹಿಸಲು ಅಕೌಂಟೆಂಟ್ ಕಂ ಮ್ಯಾನೇಜರ್ ಬೇಕಾಗಿದ್ದಾರೆ. ವಿದ್ಯಾರ್ಹತೆ: ಬಿಕಾಂ, ಟ್ಯಾಲಿ, ಕಂಪ್ಯೂಟರ್ ಜ್ಞಾನ ಅತ್ಯವಶ್ಯಕ. ಪುರುಷರಿಗೆ ಆದ್ಯತೆ. ಸಂಪರ್ಕಿಸಿ.
ನಗರವಾಣಿ ಕಚೇರಿ
ಹೋಟೆಲ್ ಶಾಂತಿ ಪಾರ್ಕ್ ಆವರಣ,
ಅಶೋಕ ರಸ್ತೆ, ದಾವಣಗೆರೆ.

# ಸಿನಿಮಾ ಸಿಂಚನ

## ಈ ವಾರ ತೆರೆಗೆ ಬಹು ನಿರೀಕ್ಷಿತ 'ಬ್ರ್ಯಾಟ್'

ಡಾಲ್ಫಿನ್ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಮಂಜುನಾಥ್ ಕಂದಕೂರ್ ನಿರ್ಮಿಸಿರುವ, ಶಶಾಂಕ್ ನಿರ್ದೇಶನದ ಹಾಗೂ ಡಾರ್ಲಿಂಗ್ ಕೃಷ್ಣ ನಾಯಕನಾಗಿ ನಟಿಸಿರುವ ಬಹು ನಿರೀಕ್ಷಿತ 'ಬ್ರ್ಯಾಟ್' ಚಿತ್ರ ಈ ವಾರ (ಅ. 31) ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಯಶಸ್ವಿ"ಕೌಸಲ್ಯ ಸುಪ್ರಜಾ ರಾಮ" ಚಿತ್ರದ ನಂತರ ಶಶಾಂಕ್ ಹಾಗೂ ಡಾರ್ಲಿಂಗ್ ಕೃಷ್ಣ ಕಾಂಬಿನೇಶನ್ ನಲ್ಲಿ ಮೂಡಿ ಬಂದಿರುವ 'ಬ್ರ್ಯಾಟ್' ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಅರ್ಜುನ್ ಜನ್ಯ ಸಂಗೀತ ನೀಡಿರುವ ಈ ಚಿತ್ರದ ಹಾಡುಗಳು ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದ್ದು, ಜನರ ಮನ ಗೆದ್ದಿದೆ. ಟೀಸರ್ ಹಾಗೂ ಟ್ರೇಲರ್ ಗೂ ಮೆಚ್ಚುಗೆಯ ಮಹಾಪೂರವೇ ಹರಿದು ಬಂದಿದೆ. ಕೃಷ್ಣ ಅವರ ಲುಕ್ ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಚಿತ್ರವನ್ನು ತೆರೆಯ ಮೇಲೆ ನೋಡುವ ಕಾತುರದಲ್ಲಿದ್ದಾರೆ.

'ಫಸ್ಟ್ ರ್ಯಾಂಕ್ ರಾಜು' ಚಿತ್ರದ ನಂತರ ಮಂಜುನಾಥ್ ವಿ ಕಂದಕೂರ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಡಾರ್ಲಿಂಗ್ ಕೃಷ್ಣ ಅವರಿಗೆ ನಾಯಕಿಯಾಗಿ ಮನಿಶಾ ಕಂದಕೂರ್ ನಟಿಸಿದ್ದಾರೆ. ಅಚ್ಯುತಕುಮಾರ್, ರಮೇಶ್ ಇಂದಿರಾ, ಡ್ರ್ಯಾಗನ್ ಮಂಜು ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ. ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ಅಭಿಲಾಶ್ ಕಲ್ಲತ್ತಿ ಛಾಯಾಗ್ರಹಣ, ಗಿರಿ ಮಹೇಶ್ ಸಂಕಲನ ಹಾಗೂ ಮಾಸ್ ಮಾದ ಅವರ ಸಾಹಸ ನಿರ್ದೇಶನ 'ಬ್ರ್ಯಾಟ್' ಚಿತ್ರಕ್ಕಿದೆ.



## ನಿರೀಕ್ಷೆ ಹೆಚ್ಚಿಸಿದ 'ಲವ್ ಯು ಮುದ್ದು' ಟ್ರೇಲರ್



ಈಗಾಗಲೇ ಹಾಡಿನ ಮೂಲಕ ಪ್ರೇಕ್ಷಕರ ಮನಸು ಗೆದ್ದಿರುವ 'ಲವ್ ಯು ಮುದ್ದು' ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆ ಆಗಿದ್ದು, ಜಾಲತಾಣದಲ್ಲಿ ಪ್ರಶಂಸೆ ಪಡೆಯುತ್ತಿದೆ. ನವೆಂಬರ್ 7ರಂದು ರಿಲೀಸ್‌ಗೆ ಸಿದ್ಧವಾಗಿರುವ ಈ ಚಿತ್ರಕ್ಕೆ 'ಕೆಮಿಸ್ಟ್ರಿ ಆಫ್ ಕರಿಯಪ್ಪ' ಚಿತ್ರದ ನಿರ್ದೇಶಕ ಕುಮಾರ್ ಆ?ಯಕ್ಷನ್-ಕಟ್ ಹೇಳಿದ್ದಾರೆ. ಪ್ರೀತಿಯನ್ನು ಪಡೆದುಕೊಳ್ಳುವ ಶಕ್ತಿ ಇಲ್ಲದೇ ಇದ್ರೆ ಪ್ರೀತಿ ಮಾಡಬಾರದು ಎಂಬ ಎಳೆಯನ್ನು ಇಟ್ಕೊಂಡು 'ಲವ್ ಯು ಮುದ್ದು' ಸಿನಿಮಾ ಮೂಡಿ ಬಂದಿದೆ. ಇದೊಂದು ನೈಜಘಟನೆ ಆಧಾರಿತ ಸಿನಿಮಾ ಕೂಡ ಆಗಿದೆ. ಹೌದು ಮಹಾರಾಷ್ಟ್ರದ ಸೊಲ್ಲಾಪುರನಲ್ಲಿ ಕೆಲವು ವರ್ಷಗಳ ಹಿಂದೆ ನಡೆದ ಘಟನೆಯನ್ನು ಆದರಿಸಿ ಈ ಚಿತ್ರಕ್ಕೆ ಚಿತ್ರಕಥೆ ಬರೆದಿದ್ದಾರೆ ನಿರ್ದೇಶಕರು. ಟ್ರೇಲರ್ ಬಿಡುಗಡೆ ಕಾರ್ಯಕ್ರಮಕ್ಕೆ ಅತಿಥಿ-ಯಾಗಿ ಆಗಮಿಸಿದ್ದ ನಿರ್ಮಾಪಕ ಹಾಗೂ ಖ್ಯಾತ ಛಾಯಾಗ್ರಹಕ ಜೆ.ಜಿ. ಕೃಷ್ಣ, 'ಟ್ರೇಲರ್ ನೋಡಿದಾಗ ಹೀರೋ, ಹೀರೋಯಿನ್ ಚೆನ್ನಾಗಿ ನಟಿಸಿದ್ದಾರೆ. ಡೈರೆಕ್ಟರ್ ಹಾಗೂ ಕ್ಯಾಮೆರಾ ಮೆನ್ ತಮ್ಮ ಕೆಲಸವನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ. ಟ್ರೇಲರ್ ನೋಡಿದಾಗ ಸಿನಿಮಾ ಅದ್ಭುತವಾಗಿ ಇರಲಿದೆ ಎಂಬ ನಂಬಿಕೆ ಇದೆ. ನಿಮ್ಮ ಚಿತ್ರದ ಪ್ರತಿ ಫ್ರೇಮ್ ಸುಂದರವಾಗಿ ಇದೆ. ನಿರ್ಮಾಪಕರು ಉಳಿದರೆ ನೂರು ಫ್ಯಾಮಿಲಿಗೆ ಊಟ ಹಾಕುತ್ತಾರೆ. ಆ ನಿರ್ಮಾಪಕರು ಗೆಲ್ಲಬೇಕು' ಎಂದರು.

ನಂತರ ಮತ್ತೋರ್ವ ಅತಿಥಿ ನಟಿ ಸಂಜನಾ ಆನಂದ್ 'ಲವ್ ಯು ಮುದ್ದು ಇಡೀ ತಂಡಕ್ಕೆ ಒಳ್ಳೆಯದಾಗಲಿ. ಚಿತ್ರರಂಗಕ್ಕೆ ನನ್ನನ್ನು ಪರಿಚಯಿಸಿದ್ದು ಕುಮಾರ್. ಅವರ ಬರವಣಿಗೆ ನನಗೆ ತುಂಬಾ ಇಷ್ಟವಾಗುತ್ತದೆ. ಲವ್ ಯು ಮುದ್ದು ಟ್ರೇಲರ್ ಪ್ರಾಮಿಸಿಂಗ್ ಆಗಿದೆ. 'ಕೆಮಿಸ್ಟ್ರಿ ಆಫ್ ಕರಿಯಪ್ಪ' ಎಷ್ಟು ಸಕ್ಸಸ್ ಕೊಟ್ಟಿತ್ತೋ ಅದರ ನೂರಷ್ಟು ಸಕ್ಸಸ್ ಈ ಚಿತ್ರ ಕೊಡಲಿ. ಸಿದ್ದು ಅವರ ಡಿಡಿಕೇಷನ್ ನೋಡಿ ಖುಷಿಯಾಯ್ತು. ಇಡೀ ತಂಡಕ್ಕೆ ಒಳ್ಳೆದಾಗಲಿ' ಎಂದು ತಂಡಕ್ಕೆ ಶುಭಾಶಯ ತಿಳಿಸಿದರು. ಇದೇ ಸಂದರ್ಭದಲ್ಲಿ ನಿರ್ದೇಶಕ ಕುಮಾರ್ ಮಾತನಾಡಿ, 'ಇದು ನನ್ನ ಐದನೇ ಸಿನಿಮಾ. ಈಜಾನರ್ ಬಿಟ್ಟು ಇದು ಬೇರೆ ವಿಷಯ. ಮಹಾರಾಷ್ಟ್ರದಲ್ಲಿ ನಡೆದ ಘಟನೆ ಇಟ್ಕೊಂಡು ಸಿನಿಮಾ ಹೇಳಲಾಗಿದೆ. ಇದು ಮನಸ್ಸಿಗೆ ಮುಟ್ಟುವ ಕಥೆ. ನಿರ್ಮಾಪಕರು ನನ್ನ ಮೊದಲ ಸಿನಿಮಾದಿಂದ ಸಪೋರ್ಟ್ ಮಾಡಿಕೊಂಡು ಬಂದಿದ್ದಾರೆ. ಇದೀಗ ಲವ್ ಯು ಮುದ್ದು ಚಿತ್ರಕ್ಕೆ ಹಣ ಹಾಕಿದ್ದಾರೆ. ಒಳ್ಳೆ ತಾರಾ ಬಳಗ ಚಿತ್ರದಲ್ಲಿದೆ' ಎಂದರು.

## ಸಿಂಪಲ್ ಸುನಿ 'ಗತವೈಭವ'ದ ಶಿಪ್ ಸಾಂಗ್ ರಿಲೀಸ್ ಮಾಡಿದ ಶಿವಣ್ಣ

ಪ್ರತಿಯೊಂದು ಸಿನಿಮಾದಲ್ಲೂ ನಿರ್ದೇಶಕ ಸಿಂಪಲ್ ಸುನಿ ಅವರು ಡಿಫರೆಂಟ್ ಕಥಾವಸ್ತುವನ್ನು ಪ್ರೇಕ್ಷಕರ ಮುಂದಿಡುತ್ತಾರೆ. ಈಗ ಅವರು 'ಗತವೈಭವ' ಚಿತ್ರದ ಮೂಲಕ ಫ್ಯಾಂಟಸಿ ಮೈಥಾಲಜಿ ರೋಮ್ಯಾಂಟಿಕ್ ಲವ್ ಸ್ಟೋರಿ ಹೇಳೋದಿಕ್ಕೆ ಹೊರಟಿದ್ದಾರೆ. ನವ ಪ್ರತಿಭೆ ದುಶ್ಯಂತ್ ನಾಯಕನಾಗಿ ಆಶಿಕಾ ರಂಗನಾಥ್ ನಾಯಕಿ ಯಾಗ ಅಭಿನಯಿಸಿದ್ದಾರೆ. ಈಗಾಗಲೇ ತನ್ನ ಕಂಟೆಂಟ್ ಮೂಲಕ ನಿರೀಕ್ಷೆ ಹೆಚ್ಚಿಸಿರುವ ಈ ಸಿನಿಮಾ ನವೆಂಬರ್ 14ಕ್ಕೆ ತೆರೆಗೆ ಬರ್ತಿದೆ. ಸದ್ಯ ಗತವೈಭವ ಚಿತ್ರದ ಪ್ರಚಾರ ಕೆಲಸ ಭರದಿಂದ ಸಾಗಿದ್ದು, ಅದರ ಭಾಗವಾಗಿ ನಿನ್ನೆ ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಶಿಪ್ ಸಾಂಗ್ ನ್ನು ಶಿವಣ್ಣ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭಾಶಯ ಕೋರಿದರು. ಹಾಡು ಬಿಡುಗಡೆ ಮಾಡಿ ಮಾತನಾಡಿದ ಶಿವಣ್ಣ, 'ಗತವೈಭವ ಶೂಟಿಂಗ್ ಸೆಟ್ ಗೆ ಒಮ್ಮೆ ಹೋಗಿದ್ದೆ. ತುಂಬಾ ಇಷ್ಟವಾಗಿತ್ತು. ಸಿಂಪಲ್ ಸುನಿ ಅವರ ಯೋಚನೆ ಚಿಕ್ಕದಿದ್ದರೂ ಸಿನಿಮಾ ನೋಡುವಾಗ ಅದು ದೊಡ್ಡದಾಗಿ ಕಾಣಿಸುತ್ತದೆ. ಅವರ ಚಿತ್ರಗಳಲ್ಲಿ ಕಮರ್ಷಿಯಲ್, ಜೀವನದ ಮೌಲ್ಯ, ಮೇಕಿಂಗ್, ಇಂದಿನ ಟ್ರೆಂಡ್ ಗೆ ತಕ್ಕಂತೆ ಅಚ್ಚುಕಟ್ಟಾಗಿ ಮಾಡುತ್ತಾರೆ. ಒಬ್ಬ ಅಣ್ಣನಾಗಿ ಅವರ ಸಿನಿಮಾ ಹಿಟ್ ಆಗಲಿ. ಮನೋಹಕ ಸಿನಿಮಾ ಆಗುತ್ತದೆ. ಅದು ಅಮೇಜಿಂಗ್ ಸಿನಿಮಾ ಆಗುತ್ತದೆ. ಗತವೈಭವ ಚಿತ್ರದ ನಿರ್ಮಾಪಕರಿಗೆ ಧನ್ಯವಾದ ಹೇಳಬೇಕು. ನಂಬಿಕೆ ಇಟ್ಕೊಂಡು ಹಣ ಹಾಕಿದ್ದಾರೆ. ದುಶ್ಯಂತ್ ಅವರದ್ದು ಮೊದಲ ಸಿನಿಮಾ ಅನಿಸುವುದಿಲ್ಲ. ಅವರು ಮಾಡಿರುವುದು ಸುಲಭದ ಪಾತ್ರವಲ್ಲ. ಮೊದಲ ಚಿತ್ರದಲ್ಲಿ ಒಳ್ಳೆ ಟ್ಯಾಲೆಂಟ್ ತೋರಿಸಿದ್ದಾರೆ. ಮ್ಯೂಸಿಕ್, ಛಾಯಾಗ್ರಹಣ ಅದ್ಭುತವಾಗಿ ಮೂಡಿ ಬಂದಿದೆ. ಆಶಿಕಾ ಮೊದಲು ಹೇಗೆ ಇದ್ದರೂ ಈಗಲೂ ಹಾಗೇ ಇದ್ದಾರೆ. ಕಿಶನ್ ಅದ್ಭುತ ಡ್ಯಾನ್ಸರ್. ಈ ಸಿನಿಮಾ ಚೆನ್ನಾಗಿ ಆಗುತ್ತದೆ. ಚಿತ್ರದಲ್ಲಿ ಪಾಸಿಟಿವ್ ವೈಬ್ ಇದೆ. ಇಡೀ ತಂಡಕ್ಕೆ ಒಳ್ಳೆಯದಾಗಲಿ' ಎಂದರು.

ಸಿಂಪಲ್ ಸುನಿ ಮಾತನಾಡಿ, 'ನಾನು ಡೈರೆಕ್ಟರ್ ಆಗಿದ್ದರೂ ಯಾವ ಶಿವಣ್ಣ ಫ್ಯಾನ್ ಆಗಿ ಇರಲು ಇಷ್ಟಪಡುತ್ತೇನೆ. ಮನಮೋಹಕ ಶಿವಣ್ಣನಿಗೆ ಸ್ಕ್ರಿಪ್ಟ್ ಕೊಟ್ಟಾಗ ಅಡ್ವಾನ್ಸ್ ಆಗದೇ ಫೋಟೋಶೂಟ್ ಮಾಡಲು ಒಪ್ಪಿದ್ದರು. ಈ ವಯಸ್ಸಿನಲ್ಲಿ ಬಹಳಷ್ಟು ಸಂಖ್ಯೆಯ ಸಿನಿಮಾಗಳನ್ನು ಹೊಂದಿರುವ ಹೀರೋ ಅಂದರೆ ಜಗತ್ತಿನಲ್ಲಿ ಅದು ಶಿವಣ್ಣ ಒಬ್ಬರೇ ಎನ್ನುವುದನ್ನು ಎದೆ ತಟ್ಟಿಕೊಟ್ಟಿಕೊಂಡು ಹೇಳಬಹುದು. ಗತವೈಭವ ಸಾಂಗ್ ಬಗ್ಗೆ ಹೇಳುವುದಾದರೆ ಪೋರ್ಚುಗಲ್ ನಲ್ಲಿ ಶೂಟಿಂಗ್ ಮಾಡಲಾಗಿದೆ. ಈ ಹಾಡಿಗೆ ಭೂಷಣ್ ಮಾಸ್ಟರ್ ಒಳ್ಳೆ ಎಫರ್ಟ್ ಹಾಕಿದ್ದಾರೆ. ದುಶ್ಯಂತ್ ಹಾಗೂ ಆಶಿಕಾ ಈ ಗೀತೆಗೆ ಸಖತ್ ಸ್ಟೆಪ್ ಹಾಕಿದ್ದಾರೆ' ಎಂದರು.

ನಾಯಕ ದುಶ್ಯಂತ್ ಮಾತನಾಡಿ, 'ನಮ್ಮಂತ ಯುವ ನಟರಿಗೆ ಶಿವಣ್ಣ ಮಾದರಿ. ಅಪ್ಪು ಸರ್ ಕಥೆ ಕೇಳಿದಾಗ ಇದು ಕಲ್ಟ್ ಸಿನಿಮಾ ಎಂದು ಹೊಗಳಿದ್ದರು. ಶಿವಣ್ಣ ಒಮ್ಮೆ ನಮ್ಮ ಸೆಟ್ ಗೆ ಸೈಲೆಂಟ್ ಆಗಿ ಬಂದು ಶೂಟಿಂಗ್ ನೋಡುತ್ತಿದ್ದರು. ಚಿತ್ರದ ಫುಟೇಜ್ ನೋಡಿ ಇಷ್ಟಪಟ್ಟಿದ್ದರು. ಚಿಕ್ಕ ಹುಡ್ಗನಿದ್ದಾಗ ಸಿನಿಮಾ ಅಂದರೆ ಮ್ಯಾಜಿಕ್ ಎಂದುಕೊಂಡಿದ್ದೆ. ಆದರೆ ಈಗ ನನ್ನ ಜೀವನದಲ್ಲಿ ಮ್ಯಾಜಿಕ್ ನಡೆದಿದೆ. ಹತ್ತಕ್ಕೂ ಹೆಚ್ಚು ಸಿನಿಮಾ ಮಾಡಿದ ಸುನಿ ಸರ್ ಜೊತೆ ಕೆಲಸ ಮಾಡಿದ್ದೇನೆ. ಮೂರು ಭಾಷೆಗಳಲ್ಲಿ ಕೆಲಸ ಮಾಡಿದ ಆಶಿಕಾ ರಂಗನಾಥ್, ಒಳ್ಳೆ ಮ್ಯೂಸಿಕ್ ಡೈರೆಕ್ಟರ್, ಕ್ಯಾಮೆರಾ ಮೆನ್ ನಮ್ಮ ಚಿತ್ರದಲ್ಲಿ ಕೆಲಸ ಮಾಡಿರುವುದು ಮ್ಯಾಜಿಕ್' ಎಂದರು. ನಟಿ ಆಶಿಕಾ ರಂಗನಾಥ್ ಮಾತನಾಡಿದರು.



## ಇದು ಹಂಸಲೇಖ ಸಂಸ್ಥೆಯ ಕಾಣಿಕೆ



ನಾದಬ್ರಹ್ಮ ಹಂಸಲೇಖ ಅವರ ಐದನಿ ಎಂಟರ್ಟೈನ್ಮೆಂಟ್ ಸಂಸ್ಥೆಯೂ ಪ್ರತಿ ವರ್ಷ ಒಬ್ಬಬ್ಬೊ ಸಾಧಕರಿಗೆ ಜೀವಮಾನದ ಸಾಧನೆಗಾಗಿ ನೀಡುವ 'ಐದನಿ ಚಿನ್ನದ ಪದಕ' ನೀಡಿ ಗೌರವುಸುತ್ತಾ ಬಂದಿದೆ. ಈ ಮೊದಲ ಗೌರವವನ್ನು ಡಾ ಶಿವರಾಜ್ ಕುಮಾರ್ ಅವರಿಗೆ, ಎರಡನೆಯದಾಗಿ ಹಿರಿಯ ನಿರ್ದೇಶಕರಾದ ಶ್ರೀ ರಾಜೇಂದ್ರ ಸಿಂಗ್ ಬಾಬು ಅವರಿಗೆ ನೀಡಿತ್ತು. ಇದೀಗ ಮೂರನೆಯವರಾಗಿ ಪ್ರಾಗೈತಿಹಾಸಿಕ ತಜ್ಞ ಡಾ ರವಿ ಕೋರಿ ಶೆಟ್ಟರ್ ಅವರನ್ನು ಆಯ್ಕೆ ಮಾಡಿದ್ದಾರೆ. ಈ ಕುರಿತು ಮಾಹಿತಿಯನ್ನು ಬೆಂಗಳೂರಿನಲ್ಲಿ ನಡೆದ ಸುದ್ದಿ ಗೋಷ್ಠಿಯಲ್ಲಿ ಘೋಷಿಸಲಾಯಿತು. ಈ ವೇಳೆ ಮಾತನಾಡಿದ ಹಂಸಲೇಖ, 'ನವೆಂಬರ್ 14 ರಂದು ಬಳ್ಳಾರಿಯ ಸಂಗನಕಲ್ಲು ಪುರಾತತ್ವ ಮ್ಯೂಸಿಯಂ ಎದುರು ರವಿ ಕೋರಿಶೆಟ್ಟರ್ ಅವರಿಗೆ ಐದನಿ ಚಿನ್ನದ ಪದಕ ನೀಡಿ ಗೌರವಿಸಲಿದ್ದೇವೆ. ಪದ್ಮಶ್ರೀ ಪ್ರಶಸ್ತಿಗೆ ಅರ್ಹರಾಗಿರುವ ಕೋರಿಶೇಟ್ಟರ್ ಅವರಿಗೆ ಇನ್ನೂ ಸಹ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸಿಗದಿರುವುದು ವಿಷಾದನೀಯ. ಮತ್ತು ಈಗಿನ ಸರ್ಕಾರ ಈ ವರ್ಷದ ರಾಜ್ಯೋತ್ಸವ ಪ್ರಶಸ್ತಿ ನೀಡಿಲೆಂದು' ಹಂಸಲೇಖ ಅವರು ಆಗ್ರಹಿಸಿದರು. ರವಿ ಕೋರಿ ಶೆಟ್ಟರ್ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಲು ಸಚಿವ ಶಿವರಾಜ್ ತಂಗಡಗಿ ಅವರೊಂದಿಗೆ ಹಂಸಲೇಖ ಅವರು ಮಾತಾನಾಡಿರುವುದಾಗಿ ತಿಳಿಸಿದರು. ಸುದ್ದಿಗೋಷ್ಟಿಯಲ್ಲಿ ಡಾ.ಹಂಸಲೇಖ, ಹರ್ಷಕುಮಾರ್ ಕುಗ್ವೆ ಮತ್ತು ಇತಿಹಾಸ ದರ್ಪಣ ಪತ್ರಿಕೆ ಸಂಪಾದಕರಾದ ಹಂ.ಗು.ರಾಕೇಶ್ ಉಪಸ್ಥಿತರಿದ್ದರು.

## ಪ್ರಮೋದ್ 'ಹಲ್ಕಾ ಡಾನ್'ಗೆ ಮುಹೂರ್ತ ಶಿವಣ್ಣ, ಸುದೀಪ್ ಸಾಥ್



'ಟಗರು', 'ಸಲಗ' ಹಾಗೂ 'ಯುಐ' ಚಿತ್ರಗಳನ್ನು ನಿರ್ಮಿಸಿರುವ ಕೆ.ಪಿ. ಶ್ರೀಕಾಂತ್ ಇದೀಗ ಹೊಸ ಸಿನಿಮಾ ಘೋಷಣೆ ಮಾಡಿದ್ದಾರೆ. ವೀನಸ್ ಎಂಟರ್‌ಟೈನರ್ ಬ್ಯಾನರ್ ಅಡಿಯಲ್ಲಿ ಮೂಡಿ ಬರ್ತಿರುವ ನಾಲ್ಕನೇ ಚಿತ್ರಕ್ಕೆ 'ಹಲ್ಕಾ ಡಾನ್' ಎಂಬ ಶೀರ್ಷಿಕೆ ಇಡಲಾಗಿದೆ. ಇತ್ತೀಚೆಗೆ ಬೆಂಗಳೂರಿನ ಬಂಡಿ ಮಹಾಕಾಳಿ ದೇವಸ್ಥಾನದಲ್ಲಿ ಚಿತ್ರದ ಮುಹೂರ್ತ ಸಮಾರಂಭ ನಡೆದಿದೆ. ಶಿವಣ್ಣ-ಗೀತಾ ದಂಪತಿ, ಸುದೀಪ್, ರಚಿತಾ ರಾಮ್, ದುನಿಯಾ ವಿಜಯ್, ವಿನಯ್ ರಾಜ್ ಕುಮಾರ್, ನಿರ್ದೇಶಕ ಆರ್ ಚಂದ್ರು ಸೇರಿದಂತೆ ಹಲವು ತಾರೆಯರು ತಂಡಕ್ಕೆ ಶುಭ ಕೋರಿದ್ದಾರೆ. ಇದೇ ವೇಳೆ ಚಿತ್ರರಂಗದಲ್ಲಿ 50 ವರ್ಷ ಪೂರೈಸಿದ ಸಾಯಿ ಕುಮಾರ್ ಅವರಿಗೆ ಚಿತ್ರತಂಡ ಸನ್ಮಾನಿಸಿದೆ. ಕಿಚ್ಚ ಸುದೀಪ್ ಚಿತ್ರಕ್ಕೆ ಕ್ಲ್ಯಾಪ್ ಮಾಡಿದ್ದು, ಗೀತಾಕ್ಕ ಹಾಗೂ ರಚಿತಾ ರಾಮ್ ಕ್ಯಾಮೆರಾಗೆ ಚಾಲನೆ ಕೊಟ್ಟರು. ಶಿವಣ್ಣ ಮೊದಲ ದೃಶ್ಯಕ್ಕೆ ಆಕ್ಷನ್-ಕಟ್ ಹೇಳಿದರು. 'ರತ್ನನ್ ಪ್ರಪಂಚ' ಖ್ಯಾತಿಯ ಪ್ರಮೋದ್ ನಾಯಕನಾಗಿ, ಅಮೃತಾ ಅಯ್ಯಂಗಾರ್ ನಾಯಕಿಯಾಗಿ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಡೈಲಾಗ್ ಕಿಂಗ್ ಸಾಯಿಕುಮಾರ್ ಕೂಡ ಪ್ರಮುಖ ಪಾತ್ರದಲ್ಲಿ ಬಣ್ಣ ಹಚ್ಚಿದ್ದಾರೆ. ರಮೇಶ್ ಇಂದಿರಾ, ಜ್ಯೋತಿ ರೈ ತಾರಾಬಳಗದಲ್ಲಿದ್ದಾರೆ.

ಮುಹೂರ್ತದ ನಂತರ ಮಾತನಾಡಿದ ನಟ 'ದುನಿಯಾ' ವಿಜಯ್, 'ಶ್ರೀಕಾಂತ್ ಸರ್ ಮೇಲೆ ಪ್ರೀತಿ, ಕೋಪ ಎರಡು ಇದೆ. ಸಿನಿಮಾ ಮಾಡದೇ ಇದ್ದಾಗ ಕೋಪ, ಮಾಡಿದಾಗ ಖುಷಿ ಇರುತ್ತದೆ. ನಾನು ಒಂದು ಹಂತದಿಂದ ದೊಡ್ಡ ಮಟ್ಟಕ್ಕೆ ಹೋಗಲು ಕಾರಣ ಶ್ರೀಕಾಂತ್ ಸರ್ ಬ್ಯಾನರ್, 'ಸಲಗ' ಸಿನಿಮಾ ಬಳಿಕ 'ಭೀಮ' ಸಿನಿಮಾ. ನನಗೆ ಮತ್ತೊಂದು ಜನ್ಮ ಕೊಟ್ಟ ಪ್ರೊಡಕ್ಷನ್ ಹೌಸ್. 'ಹಲ್ಕಾ ಡಾನ್' ಸಿನಿಮಾ ಸೂಪರ್ ಹಿಟ್ ಆಗಲಿ. ಈ ಚಿತ್ರದ ಕಾಂಬಿನೇಷನ್ ಸೂಪರ್ ಆಗಿದೆ. ಸತ್ಯ ಹೆಗ್ಡೆ ಹಾಗೂ ಸೂರಿ ಅವರನ್ನು ನಾನು ಯಾವತ್ತೂ ಮರೆಯುವಂತಿಲ್ಲ. ಹರಿಕೃಷ್ಣ ಸೂಪರ್ ಹಿಟ್ ಹಾಡು ಕೊಟ್ಟವರು. ಗಾಂಧಿ ನಗರದಲ್ಲಿ ರೇಸ್ ಕುದುರೆಗಳ ಕರೆಕ್ಟ್ ಕುನ್ನಿಸ್ ಬಾಯಿ ಹಿಡಿಯುವವರು ಅಂದರೆ ಅದು ಶ್ರೀಕಾಂತ್ ಸರ್. 'ರತ್ನನ್ ಪ್ರಪಂಚ'ದಲ್ಲಿ ಪ್ರಮೋದ್ ಅವರ ಆಕ್ಟಿಂಗ್ ಚೆನ್ನಾಗಿ ಮಾಡಿದ್ದಾರೆ. ಇಡೀ ತಂಡಕ್ಕೆ ಒಳ್ಳೆಯದಾಗಲಿ' ಎಂದರು.

ನಂತರ ನಿರ್ಮಾಪಕ ಕೆ.ಪಿ ಶ್ರೀಕಾಂತ್ ಮಾತನಾಡಿ, 'ಹಲ್ಕಾ ಡಾನ್ ಸಿನಿಮಾದ ಮುಹೂರ್ತ ನೋಡಿದರೆ ಎಂಥ ಎನರ್ಜಿ ಬಂದಿದೆ ಎಂದರೆ ಮುಂದೆ ಶಿವಣ್ಣ ಹಾಗೂ ವಿಜಯ್ ಅವರ ಜೊತೆ ಸಿನಿಮಾ ಮಾಡುತ್ತೇನೆ. ಅವರಿಬ್ಬರ ಜೊತೆ ಹರಿಕೃಷ್ಣ ಮ್ಯೂಸಿಕ್ ಇರಲಿದೆ. ಕಾಲರ್ ಎತ್ಕೊಂಡು ಕನ್ನಡ ಪ್ರೇಕ್ಷಕರು ಸಿನಿಮಾ ನೋಡಬಹುದು. ನಮ್ಮ ಸಂಸ್ಥೆಗೆ ಈ ಎನರ್ಜಿ ಇರಲು ಕಾರಣರಾದವರಲ್ಲಿ ಒಬ್ಬರು ವಿಜಿ ಸರ್. ನನ್ನ ಹಿಂದೆ ಒಳ್ಳೆ ತಂಡ ಇದೆ. ಎಲ್ಲರ ಆಶೀರ್ವಾದದಿಂದ ಸಿನಿಮಾ ಚೆನ್ನಾಗಿ ಆಗಲಿದೆ. 'ಹಲ್ಕಾ ಡಾನ್' ಎಂಬುದು ಆಡು ಭಾಷೆ. ಚಿತ್ರದಲ್ಲಿ ಪ್ರಮೋದ್ ಸಾಯಿ ಕುಮಾರ್ ಸರ್ ಫ್ಯಾನ್' ಎಂದರು.

# ರಾಜ್ಯೋತ್ಸವಕ್ಕೆ ಪ್ಲಾಸ್ಟಿಕ್ ಧ್ವಜ ನಿಷೇಧ

ದಾವಣಗೆರೆ ಅ.27 : ನವಂಬರ್ 1 ರಂದು ಆಚರಿಸಲಿರುವ ಕರ್ನಾಟಕ ರಾಜ್ಯೋತ್ಸವದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಗಾಗಿ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸಲು ಸಾರ್ವಜನಿಕರಲ್ಲಿ ಮನವಿ ಮಾಡಿ ಜಿಲ್ಲೆಯಾದ್ಯಂತ ಪ್ಲಾಸ್ಟಿಕ್ ಧ್ವಜಗಳ ಮಾರಾಟ ಮತ್ತು ಬಳಸದಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ ತಿಳಿಸಿದ್ದಾರೆ. ಕೈಯಿಂದ ನೂಲುವ ಮತ್ತು ಕೈಯಿಂದ ನೇಯ್ದ ಅಥವಾ ಯಂತ್ರದಿಂದ ಮಾಡಿರುವ ಹಾಗೂ ಹತ್ತಿ ಪಾಲಿಸ್ಟರ್, ಉಣ್ಣೆ, ರೇಷ್ಮೆ ಖಾದಿಯಿಂದ ಮಾಡಿರುವ ಧ್ವಜಗಳನ್ನು ಬಳಸಬೇಕು. ಪ್ಲಾಸ್ಟಿಕ್ ಧ್ವಜ ಮಾರಾಟ ಮಾಡುವಂತಹ ಅಂಗಡಿ ಮಾಲಿಕರುಗಳ ವಿರುದ್ಧ ಪರಿಸರ ಸಂರಕ್ಷಣಾ ಕಾಯ್ದೆ ಪರಿಸರ ಸಂರಕ್ಷಣಾ ಕಾಯ್ದೆಯಡಿ ಕ್ರಮಕೈಗೊಳ್ಳಲಾಗುವುದು. ಕನ್ನಡ ರಾಜ್ಯೋತ್ಸವ ದಿನಾಚರಣೆಯ ಪ್ರಯುಕ್ತ ಪ್ಲಾಸ್ಟಿಕ್ ಧ್ವಜಗಳ ಮಾರಾಟ ಮತ್ತು ಉಪಯೋಗ ಮಾಡಬಾರದು ಎಂದು ಎಚ್ಚರಿಸಿದ್ದಾರೆ.


**ಕಥೆ-ಕವನ, ಚುಟುಕು, ಮಕ್ಕಳು ಬಿಡಿಸಿದ ಚಿತ್ರಗಳನ್ನು ಪ್ರಕಟಿಸುವ ವಿಭಾಗ**

**9740137083**


## ದಿನಕ್ಕೊಂದು ಚುಟುಕು

ಹಣತೆ :-

ಕತ್ತಲೆ ಕುಹಕ ಶಾಂತದಿ ಆವರಿಸುವುದು
ಬೆತ್ತಲೆಯ ಭಾವ ವಿಶ್ರಾಂತಿಗೆ ತೆರಳುವುದು
ಹಣತೆಯೊಂದು ತನ್ನ ಕಾಯಕವ ಮೆರೆವುದು
ಬೆಳಕಿನ ಘನತೆ ತೋರುತ ಬೆಳಗುವುದು ॥

– ಲಿಂಗೇಶ್ ಹೆಚ್ ಬಿದರಕುಂದಿ

## ದಿನಕ್ಕೊಂದು ನುಡಿ ಮುತ್ತು

ಮೆದುವಾಗಿ,ಇನ್ನೊಬ್ಬರು ಅದನ್ನು
ದುರುಪಯೋಗಪಡಿಸಿಕೊಳ್ಳುವಷ್ಟು ಅಲ್ಲ!
ತಲೆಬಾಗಿ,ಇನ್ನೊಬ್ಬರು ನಿಮ್ಮನ್ನು
ತುಳಿದು ತಳ್ಳುವಷ್ಟು ಅಲ್ಲ!
ತಲೆದೂಗಿ,ಇನ್ನೊಬ್ಬರನ್ನು ಹೊಗಳಿ
ಅಟ್ಟಕ್ಕೇರಿಸುವಷ್ಟಲ್ಲ!
ನಿಯತ್ತಿರಲಿ,ಅದರಿಂದ ನಿಮ್ಮ
ಒಳ್ಳೇತನಕ್ಕೆ ಕುತ್ತು ಬರುವಷ್ಟು ಅಲ್ಲ!
ಅತಿಯಾದರೆ ಅಮೃತವೂ ವಿಷ!!

– ಮಂಜುಳಾ ಪ್ರಸಾದ್ ದಾವಣಗೆರೆ


**ನಗರವಾಣಿ** ದಾವಣಗೆರೆ

ಅಕ್ಟೋಬರ್ 31, 2025
ಶುಕ್ರವಾರ,



ಪತ್ರಿಕೆಗಳಿಗೆ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
08192–254186


# ಸುಸಜ್ಜಿತ 100 ಹಾಸಿಗೆಗಳ ಆಸ್ಪತ್ರೆ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರ ಲೋಕಾರ್ಪಣೆಗೆ ಸಜ್ಜು



ದಾ ನಗರವಾಣಿ ಸುದ್ದಿ

ಹರಪನಹಳ್ಳಿ: ಮಧ್ಯ ಕರ್ನಾಟಕದಲ್ಲೇ ಮೊಟ್ಟಮೊದಲ ಬಾರಿಗೆ 100 ಹಾಸಿಗೆಯ ಅತ್ಯಾಧುನಿಕ ಹಾಗೂ ಸುಸಜ್ಜಿತ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಉದ್ಘಾಟನಾ ಸಮಾರಂಭ ನವೆಂಬರ್ 2ರಂದು ನಡೆಯಲಿದ್ದು, 3ರಿಂದ ಸಾರ್ವಜನಿಕ ಸೇವೆಗೆ ಮುಕ್ತವಾಗಲಿದೆ.

ಹರಪನಹಳ್ಳಿಯಿಂದ ಕೇವಲ ಒಂಬತ್ತು ಕಿಲೋಮೀಟರ್ ದೂರದ ಕೊಮಾರನಹಳ್ಳಿಯ ಹಚ್ಚ ಹಸಿರಿನ ಪ್ರಶಾಂತ ಪರಿಸರದಲ್ಲಿ ಆರೂವರೆ ಎಕರೆ ವಿಶಾಲ ಪ್ರದೇಶದಲ್ಲಿ ವ್ಯಾಪಿಸಿರುವ ಜನನಿ ಆಸ್ಪತ್ರೆ, ಕಲ್ಯಾಣ ಕರ್ನಾಟಕದ ಸಾಮಾಜಿಕ ಸ್ವಾಸ್ಥ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಕ ಎನಿಸಲಿದೆ ಎಂದು ಜಯ ಎಜ್ಯುಕೇಶನಲ್ ಟ್ರಸ್ಟ್ ಅಧ್ಯಕ್ಷೆ ಡಾ.ಜಯಶ್ರೀ ಪಾಟೀಲ್ ಮತ್ತ ಕಾರ್ಯದರ್ಶಿ ಡಾ.ಮಹೇಶ್ ಎಸ್.ಎನ್ ಹೇಳಿದ್ದಾರೆ.

ಈ ಭಾಗದ ಜನತೆ ಉತ್ತಮ ಆರೋಗ್ಯ ಸೌಲಭ್ಯವನ್ನು ಅರಸಿ ದೂರದ ಊರುಗಳಿಗೆ ಹೋಗುವುದನ್ನು ತಪ್ಪಿಸಿ, ಕೈಗೆಟುಕುವ ದರದಲ್ಲಿ ಮನೆಬಾಗಿಲಲ್ಲೇ ಅತ್ಯಾಧುನಿಕ ಸೌಲಭ್ಯಗಳು ಲಭಿಸುವಂತಾಗಬೇಕು ಎಂಬ ಉದ್ದೇಶದಿಂದ ಈ ಸೌಲಭ್ಯ ಅಭಿವೃದ್ಧಿಪಡಿಸಲಾಗಿದೆ.

ನವೆಂಬರ್ 2ರಂದು ನಡೆಯುವ ಉದ್ಘಾಟನಾ ಸಮಾರಂಭದ ಸಾನ್ನಿಧ್ಯವನ್ನು ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರರಾದ ಶ್ರೀ ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಹರಪನಹಳ್ಳಿ ತೆಗ್ಗಿನಮಠ ಸಂಸ್ಥಾನದ ಪಟ್ಟಾಧ್ಯಕ್ಷ ಶ್ರೀ ವರದಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು ಎಂದು ಮುಖ್ಯ ವೈದ್ಯಾಧಿಕಾರಿ ಡಾ.ರಾಜೇಶ್ ಪಾದೇಕಲ್ ವಿವರಿಸಿದ್ದಾರೆ.

ಕಾಯಿಲೆ ಬಂದ ಬಳಿಕ ಚಿಕಿತ್ಸೆ ಪಡೆಯುವ ಬದಲು ರೋಗಗಳು ಬಾರದಂತೆ ನಮ್ಮ ದೇಹಸ್ವಾಸ್ಥ್ಯವನ್ನು ಕಾಪಾಡಿಕೊಳ್ಳುವುದು ಇಂದಿನ ಅಗತ್ಯವಾಗಿದ್ದು, ಸುಸ್ಥಿರ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಜತೆಗೆ ಔಷಧರಹಿತವಾಗಿ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವ ಆರೋಗ್ಯ ಸಾಧಕರಿಗೆ ಈ ಅತ್ಯಾಧುನಿಕ ವ್ಯವಸ್ಥೆ ವರದಾನ ಎನಿಸಲಿದೆ.

ಪ್ರಕೃತಿಯ ಜ್ಞಾನ ಮತ್ತು ಆಧುನಿಕ ಆರೈಕೆಯ ಸಮನ್ವಯದೊಂದಿಗೆ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಉನ್ನತಿಗಾಗಿ ಸಲಕ ಸೌಕರ್ಯಗಳನ್ನು ಈ ಕೇಂದ್ರ ಒಳಗೊಂಡಿರುತ್ತದೆ. ಹಿಪ್ ಬಾತ್, ಸ್ಪೈನಲ್ ಬಾತ್, ಎನಿಮಾ, ಕೊಲೊನ್ ಹೈಡ್ರೊಥೆರಪಿ, ಅಂಡರ್‌ವಾ–ಟರ್ ಮಸಾಜ್, ಸೋನಾ ಮತ್ತು ಸ್ಟೀಮ್‌ಬಾತ್, ಡುಶ್ ಪ್ಯಾಕ್, ಮ್ಯಾಗ್ನೆಟೊ ಥೆರಪಿ, ಫಿಜಿಯೋಥೆರಪಿ, ಅಕ್ಯುಪಂಕ್ಚರ್ & ಅಕ್ಯುಪ್ರೆಶರ್, ವ್ಯಾಯಾಮ ಚಿಕಿತ್ಸೆ, ಆಹಾರ ಚಿಕಿತ್ಸೆ, ಮಣ್ಣು ಚಿಕಿತ್ಸೆಯಂಥ ಸೌಲಭ್ಯಗಳು ಲಭ್ಯವಿದ್ದು, ವಿಶಾಲವಾದ, ಗಾಳಿ ಬೆಳಕು ಸಮೃದ್ಧವಾದ ಯೋಗ ಸಭಾಂಗಣ, ಸ್ವಚ್ಛ ಮತ್ತು ಸುರಕ್ಷಿತ ಕ್ರಿಯಾ ಕೊಠಡಿಗಳು ಇರುತ್ತವೆ ಎಂದು ಹೇಳಿದ್ದಾರೆ.

ಸಮಗ್ರ ಹಾಗೂ ಔಷಧರಹಿತ ಚಿಕಿತ್ಸೆ, ಅನುಭವ ಸಂಪನ್ನ ವೈದ್ಯರು ಮತ್ತು ಚಿಕಿತ್ಸಕರ ಸೇವೆ, ವೈಯಕ್ತಿಕ ಚಿಕಿತ್ಸಾ ಯೋಜನೆಗಳು, ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ಚಿಕಿತ್ಸಾ ವ್ಯವಸ್ಥೆ, ಚೇತರಿಕೆ ಮತ್ತು ಪುನಶ್ಚೇತನಕ್ಕೆ ಪೂರಕ ಪ್ರಶಾಂತ ವಾತಾವರಣದಂಥ ಹಲವು ವೈಶಿಷ್ಟ್ಯಗಳನ್ನು ಹೊಂದಿದ್ದು, ಕೇಂದ್ರ–ಕ್ಕೆ ಆಗಮಿಸುವ ಅತಿಥಿಗಳಿಗೆ ಪಿಕಪ್ ಮತ್ತು ಡ್ರಾಪ್ ವ್ಯವಸ್ಥೆಯೂ ಇರುತ್ತದೆ. ಸಾಮಾನ್ಯ ವಾರ್ಡ್, ವಿಶೇಷ ಕೊಠಡಿ ಮತ್ತು ಸುಸಜ್ಜಿತ ಕಾಟೇಜ್ ಹೀಗೆ ವೈವಿಧ್ಯಮಯ ಶ್ರೇಣಿಯ ವ್ಯವಸ್ಥೆಯಲ್ಲಿ ಅತಿಥಿಗಳು ತಮ್ಮ ಆದ್ಯತೆಯನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ. ವಿವರಗಳಿಗೆ: 93530–63097/ 8317363097 ಸಂಪರ್ಕಿಸಬಹುದು.

# ನಗರದಲ್ಲಿ ರಾಜ್ಯಮಟ್ಟದ ನೃತ್ಯ ಪ್ರದರ್ಶನ



ದಾ ನಗರವಾಣಿ ಸುದ್ದಿ

ದಾವಣಗೆರೆ: ನಗರದ ಎಮ್. ಸಿ.ಸಿ. ಎ. ಬ್ಲಾಕ್ ನಲ್ಲಿರುವ ನಾಗಮ್ಮ ಕೇಶವಮೂರ್ತಿ ಸಭಾಂಗಣದಲ್ಲಿ ವಿಶ್ವರೂಪಂ ಸ್ಟುಡಿಯೋ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ರಾಜ್ಯಮಟ್ಟದ ನೃತ್ಯ ಪ್ರದರ್ಶನವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಜಿಲ್ಲಾ ಕನ್ನಡ ಚಳುವಳಿ ನೂತನ ಜಿಲ್ಲಾ ಅಧ್ಯಕ್ಷ ಶಿವರತನ್ ಉದ್ಘಾಟಿಸಿ ಮಾತನಾಡಿ, ಎಲ್ಲಾ ನೃತ್ಯಪಟುಗಳು ತಮ್ಮ ಪ್ರತಿಭೆ ತೋರಿಸಲಿಕ್ಕೆ ಇದು ಒಂದು ಉತ್ತಮ ವೇದಿಕೆಯಾಗಿದೆ. ಸ್ಪರ್ಧೆ ಅಂದ ಮೇಲೆ ಸೋಲು ಗೆಲುವು ಸಾಮಾನ್ಯ ಹಾಗೂ ಈ ಸ್ಪರ್ಧೆಗೆ ಉತ್ತಮವಾದಂತ ತೀರ್ಪುಗಾರರು ಇರುವುದರಿಂದ ಕಾರ್ಯಕ್ರಮವು ಉತ್ತಮವಾಗಿ ಯಶಸ್ವಿಯಾಗುತ್ತದೆ ಯಾರಿಗೂ ಸಂದೇಹ ಬೇಡ ನಿಮ್ಮೆಲ್ಲರ ಭವಿಷ್ಯ ಉತ್ತಮವಾಗಲಿ ಒಳ್ಳೆಯ ಪ್ರದರ್ಶನ ನೀಡಿ ಎಂದರು.

ಸ್ಪರ್ಧೆಗಳಲ್ಲಿ ರಾಜ್ಯದ ಅನೇಕ ಜಿಲ್ಲೆಗಳಿಂದ ವಿವಿಧ ನೃತ್ಯ ಸ್ಪರ್ಧಾಳುಗಳು ಭಾಗವಹಿಸಿದ್ದರು. ವಾರ್ತಾ ಇಲಾಖೆ ನಿವೃತ್ತ ನೌಕರ ಬಿ. ಎಸ್. ಬಸವರಾಜ್, ಶಿವಕುಮಾರ್, ನೃತ್ಯ ಶಿಕ್ಷಕರು, ನೃತ್ಯ ಕ್ರೀಡಾಪಟುಗಳು, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಆಡಳಿತ ಯಂತ್ರ ಸ್ತಬ್ಧವಾಗಿದೆ, ಗೃಹ ಇಲಾಖೆ....

(1ನೇ ಪುಟದಿಂದ) ಮುಸ್ಲಿಂ ಮತ ಬ್ಯಾಂಕುಗಳಿಗಾಗಿ ಹಿಂದೂ ಧರ್ಮ ಮತ್ತು ಹಿಂದೂ ಧಾರ್ಮಿಕ ಹಿತಾಸಕ್ತಿಗೆ ಧಕ್ಕೆ ತರುವ ಕೆಲಸ ಮಾಡುತ್ತಿದೆ. ಹಿಂದೂ ಮಠಾಧಿಪತಿಗಳಿಗೆ ಜಿಲ್ಲೆಯಿಂದ ಜಿಲ್ಲೆಗೆ ನಿರ್ಬಂಧ ವಿಧಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಪಕ್ಷದ ಸಂಘಟನೆಗಾಗಿ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳಲಾಗಿದ್ದು, ಈ ನಿಮಿತ್ತ ದಾವಣಗೆರೆ ಜಿಲ್ಲಾ ವೀಕ್ಷಕನಾಗಿ ಪೂರ್ವ ತಯಾರಿ ಸಭೆ ನಡೆಸಿ ಬರುವ ಸ್ಥಳೀಯ ಚುನಾವಣೆ ಸಂಬಂಧ ಪಕ್ಷದ ತಾಲ್ಲೂಕು ಮುಖಂಡರೊಂದಿಗೆ ಚರ್ಚೆ ನಡೆಸಲಾಗಿದೆ. ಜಿಲ್ಲೆಯಲ್ಲಿ ಪಕ್ಷದಲ್ಲಿ ಯಾವ ಬಣಗಳು ಇಲ್ಲ. ಎಲ್ಲರನ್ನೂ ವಿಶ್ವಾಸಕ್ಕೆ ತಗೆದುಕೊಂಡು ಸಂಘಟನೆ ಮಾಡಲಾಗುತ್ತಿದೆ. ಇಂದಿನ ಸಭೆಗೆ ಕೆಲವರು ಆರೋಗ್ಯ ಕಾರಣದಿಂದ ಗೈರಾಗಿದ್ದಾ–ರೆ. ಈ ಕುರಿತು ಅವರು ಕಾರಣಗಳನ್ನು ನೀಡಿದ್ದಾರೆ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು.

ರಾಜ್ಯದಲ್ಲಿ ಗೃಹ ಇಲಾಖೆ ಬದುಕಿದೆಯಾ ಅಥವಾ ಸತ್ತು ಹೋಗಿದೆಯಾ ಎಂಬ ಅನುಮಾನ ಕಾಡುತ್ತಿದೆ. ಎಷ್ಟು ಕೊಲೆ, ಸುಲಿಗೆ, ಅತ್ಯಾಚಾರ, ಹಗಲು ದರೋಡೆ ನಿತ್ಯ ಅವ್ಯಾಹತವಾಗಿ ನಡೆಯುತ್ತಿವೆ. ಕರ್ನಾಟಕದಲ್ಲಿ ಮನುಷ್ಯ ಮನುಷ್ಯನನ್ನು ತಿನ್ನುತ್ತಿದ್ದಾನಾ ಎಂಬ ಭಯ ಉಂಟಾಗಿದೆ. ಆಡಳಿತದಲ್ಲಿ ಬಿಗಿ ಇಲ್ಲ. ಪೊಲೀಸರಿಗೆ ಸ್ವತಂತ್ರವಾಗಿ ಕೆಲಸ ಮಾಡಲು ಸರ್ಕಾರ ಬಿಡುತ್ತಿಲ್ಲ ಎಂದು ಆರೋಪಿಸಿದರು.

ಬುರುಡೆ ಪ್ರಕರಣ ಸರ್ಕಾರಿ ಪ್ರಾಯೋಜಿತ: ಧರ್ಮಸ್ಥಳದಲ್ಲಿ ಶವಗಳ ಹೂತಿಟ್ಟ ಆರೋಪ, ಎಸ್‌ಐಟಿ ರಚನೆ, ಸಮಾಧಿ ಉತ್ಖನನ ಈ ಎಲ್ಲ ಕೆಲಸಗಳು ರಾಜ್ಯ ಸರ್ಕಾರದ ಪ್ರಾಯೋಜಿತ ನಾಟಕ, ರಾಜ್ಯ ಸರ್ಕಾರವೇ ಎಡಪಂಥೀಯರ ಜೊತೆ ಸೇರಿಕೊಂಡು ಕುತಂತ್ರ ಮಾಡುತ್ತಿದೆ. ನಟ ದರ್ಶನ ಪ್ರಕರಣದಲ್ಲಿ ನಟಿ ರಮ್ಯ ಅವರ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ನಿಂದಿಸಿದ ಯುವಕರನ್ನು ಬಂಧಿಸಿ ಜೈಲಿಗೆ ಹಾಕಲಾಗಿದೆ. ಆದ–ರೆ ಧರ್ಮಸ್ಥಳದ ಬಗ್ಗೆ ಕೆಟ್ಟದಾಗಿ ಅಪ ಪ್ರಚಾರ ಮಾಡಿದ ಯೂಟ್ಯೂಬರ್‌ಗಳನ್ನು ಏನೂ ಮಾಡಿಲ್ಲ. ಇದನ್ನು ರಾಜ್ಯದ ಜನ ಗಮನಿಸಬೇಕು. ಸರ್ಕಾರದ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದು ಹೋಗಿದೆ ಎನ್ನುವುದಕ್ಕೆ ಇದು ಸ್ಪಷ್ಟ ಉದಾಹರಣೆಯಾಗಿದೆ. ಸರ್ಕಾರ ತನ್ನ ವೈಫಲ್ಯಗಳನ್ನು ಮುಚ್ಚಿ ಹಾಕಿಕೊಳ್ಳುವ ಸಲುವಾಗಿ ಇಲ್ಲದ ಪಿತೂರಿಗಳನ್ನು ಮಾಡುತ್ತಿದೆ ಎಂದು ಹೇಳಿದರು.

ಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಒಗ್ಗಟ್ಟಾಗಿ ಕೆಲಸ ಮಾಡಲು ತೀರ್ಮಾನಿಸಲಾಗಿದೆ. ನಾವು ಒಗ್ಗಟ್ಟಾಗಿ ದುಡಿದರೆ ಎಲ್ಲ ಕಡೆ ಗೆಲ್ಲುವ ವಿಶ್ವಾಸವಿದೆ. ರಾಜ್ಯದಲ್ಲಿ ಕಾಂಗ್ರೆಸ್ ವಿರೋಧಿ ಆಕ್ರೋಶ ಜನರಲ್ಲಿ ಮನೆ ಮಾಡಿದ್ದು, ಇದು ನಮಗೆ ವರವಾಗಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ರಾಜಶೇಖರ್ ನಾಗಪ್ಪ, ಮಾಜಿ ಶಾಸಕರಾದ ಪ್ರೀತಂ ಗೌಡ, ಮಾಡಾಳು ವಿರೂಪಾಕ್ಷಪ್ಪ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ, ಮಾಜಿ ಮುಖ್ಯ ಸಚೇತಕ ಡಾ.ಎ.ಎಚ್.ಶಿವಯೋಗಿ ಸ್ವಾಮಿ ಉಪಸ್ಥಿತರಿದ್ದರು.

# ಪೊಲೀಸರು ಕೇಸ್ ತನಿಖೆಯ ಬಗ್ಗೆ ಎಚ್ಚರ ವಹಿಸಬೇಕು



ದಾ ನಗರವಾಣಿ ಸುದ್ದಿ

ದಾವಣಗೆರೆ: ಸಾರ್ವಜನಿಕರು ಇಲಾಖೆಯ ಮೇಲೆ ನಂಬಿಕೆ ಇಡುವಂತೆ ಪೊಲೀಸರು ಕರ್ತವ್ಯ ಮಾಡಬೇಕೆಂದು ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ್ ಕರೆ ನೀಡಿದರು.

ಗುರುವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆರಂಭವಾದ ಪೂರ್ವ ವಲಯ ಪೊಲೀಸ್ ಕರ್ತವ್ಯ ಕೂಟ ಉದ್ಘಾಟಿಸಿ ಮಾತನಾಡಿದ ಅವರು, ಜನಸಾಮಾನ್ಯರು ತಮಗೆ ಏನೇ ತೊಂದರೆಯಾದರೂ ಮೊದಲು ಪೊಲೀಸ್ ಠಾಣೆಗೆ ಬರುತ್ತಾರೆ. ಆದರೆ ನ್ಯಾಯಾಲಯದಲ್ಲಿ ಕೇಸ್ ಬಿದ್ದು ಹೋದರೆ ಪೊಲೀಸರು ಮತ್ತು ನ್ಯಾಯಾಲಯದ ಮೇಲೆ ಅಪವಾದ ಹೊರಿಸುತ್ತಾರೆ. ಆದ್ದರಿಂದ ತನಿಖಾಧಿಕಾರಿಗಳು ಈ ಬಗ್ಗೆ ಎಚ್ಚರ ವಹಿಸಬೇಕು ಎಂದು ಸಲಹೆ ನೀಡಿದರು.

**ನ್ಯಾ.ಮಂಜಪ್ಪ**

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ, ಇಲ್ಲಿ ಕಲಿಯುವ ಕೌಶಲ್ಯಗಳನ್ನು ತನಿಖೆ ಸಂದರ್ಭದಲ್ಲಿ ಅಳವಡಿಸಿಕೊಳ್ಳಬೇಕು. ಪೊಲೀಸ್ ಠಾಣೆಯಲ್ಲಿ ದಾಖಲಾಗುವ ಪ್ರಕರಣಗಳಿಗೆ ತಾರ್ಕಿಕ ಅಂತ್ಯ ನೀಡಿ, ಸಂತ್ರಸ್ತರಿಗೆ ನ್ಯಾಯ ಕೊಡಿಸಿದಾಗಲೇ ನೀವು ಮಾಡುವ ಕೆಲಸಕ್ಕೆ ಅರ್ಥ ಸಿಗಲಿದೆ ಎಂದರು.

ಪೊಲೀಸ್ ಕರ್ತವ್ಯ ಕೂಟದಲ್ಲಿ ಸೋಲು, ಗೆಲುವು, ಬಹುಮಾನ ಮಾತ್ರವೇ ಮುಖ್ಯವಾಗಬಾರದು. ಎಲ್ಲರೂ ಉತ್ಸಾಹದೊಂದಿಗೆ ಇದರಲ್ಲಿ ಭಾಗವಹಿಸುವುದು ಮುಖ್ಯ. ಕರ್ತವ್ಯ ಕೂಟವು ನಿಮ್ಮಲ್ಲಿ ತಾಂತ್ರಿಕ ಸಾಕ್ಷ್ಯಾಧಾರ ಸಂಗ್ರಹಿಸುವ ಕೌಶಲ್ಯ ಬೆಳೆಸುವ ಜೊತೆಗೆ ಯಾವುದೇ ಪ್ರಕರಣಕ್ಕೆ ತಾರ್ಕಿಕ ಅಂತ್ಯ ನೀಡಲು ನೆರವಾಗಲಿದೆ ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕ ಪರಮೇಶ್ವರ ಹೆಗಡೆ, ಆರ್. ಎಫ್. ಎಸ್. ಎಲ್ ಉಪನಿರ್ದೇಶಕಿ ಡಾ.ಛಾಯಾ ಕುಮಾರಿ, ಡಿವೈಎಸ್ಪಿ ಎ.ಕೆ.ರುದ್ರೇಶ್, ದೇವರಾಜ್ ಸಂಗೇನಹಳ್ಳಿ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಎರಡು ದಿನಗಳ ಕರ್ತವ್ಯ ಕೂಟದಲ್ಲಿ ಪೂರ್ವ ವಲಯ ವ್ಯಾಪ್ತಿಯ ದಾವಣಗೆರೆ, ಚಿತ್ರದುರ್ಗ, ಹಾವೇರಿ ಮತ್ತು ಶಿವಮೊಗ್ಗ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದು, 6 ವಿಭಾಗಗಳಲ್ಲಿ ಸ್ಪರ್ಧೆ ನಡೆಯುತ್ತಿವೆ.

## ಮುಖ್ಯಮಂತ್ರಿ ಹುದ್ದೆ ಗುದ್ದಾಟ:...

(1ನೇ ಪುಟದಿಂದ) ಎಂದು ಮೂಲಗಳು ತಿಳಿಸಿವೆ.

ಡಿ ಕೆ ಸುರೇಶ್ ಹೇಳಿದ್ದೇನು?

ಈ ಮಧ್ಯೆ, 2023ರಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ–ರೆ ಅಧಿಕಾರ ಹಂಚಿಕೆಯ ಒಪ್ಪಂದದಂತೆ ಹಿರಿಯ ನಾಯಕಿ ಸೋನಿಯಾ ಗಾಂಧಿ ಮತ್ತು ವಯನಾಡ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ತಮ್ಮ ಶ್ರೀರಕ್ಷೆಗೆ ನಿಲ್ಲುತ್ತಾರೆ, ತಮ್ಮ ಬೆಂಬಲಕ್ಕೆ ನಿಲ್ಲುತ್ತಾರೆ ಎಂಬ ಆಶಾವಾದದಲ್ಲಿ ಶಿವಕುಮಾರ್ ಇದ್ದಾರೆ.

ಈ ಬಗ್ಗೆ ನಿನ್ನೆ ಪ್ರತಿಕ್ರಿಯೆ ನೀಡಿರುವ ಡಿ ಕೆ ಸುರೇಶ್, ನಮ್ಮಲ್ಲಿ ಆಶಾವಾದ ಇದೆ. ಶಿವಕುಮಾರ್ ಅವರಿಗೆ ಮುಖ್ಯಮಂತ್ರಿಯಾಗುವ ಅದೃಷ್ಟವಿದ್ದರೆ ಅದು ಆಗುತ್ತದೆ, ಇಲ್ಲದಿದ್ದರೆ ಆಗುವುದಿಲ್ಲ. ಅವರು ಹೈಕಮಾಂಡ್ ಸೂಚನೆಯಂತೆ ಮುಂದಿನ ಹೆಜ್ಜೆ ಇಡುತ್ತಾರೆ ಎಂದರು.

ಸಿದ್ದರಾಮಯ್ಯನವರು 2028 ರ ವಿಧಾನಸಭಾ ಚುನಾವಣೆಯನ್ನು ಮುನ್ನಡೆಸುವುದರಲ್ಲಿ ಮತ್ತು ಚುನಾವಣೆಗಳಲ್ಲಿ ಸ್ಪರ್ಧಿಸುವುದರಲ್ಲಿ ಯಾವುದೇ ತಪ್ಪಿಲ್ಲ, ಅವರು ಚುರುಕಾಗಿದ್ದಾರೆ ಎಂದು ಡಿ ಕೆ ಸುರೇಶ್ ಹೇಳಿದರು. ಎಸ್‌ಸಿ/ಎಸ್‌ಟಿ ಸಚಿವರು ರ್‍ಯಾಲಿಯನ್ನು ಯೋಜಿಸುತ್ತಿರುವ ಬಗ್ಗೆ, ಇದು ಸ್ವಾಗತಾರ್ಹ ಕ್ರಮವಾಗಿದೆ ಏಕೆಂದರೆ ಇದು ಪಕ್ಷವನ್ನು ಬಲಪಡಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಸಿದ್ದರಾಮಯ್ಯ ಅವರನ್ನು ಸಿಎಂ ಆಗಿ ಮುಂದುವರಿಸಲು ಪ್ರಯತ್ನಿಸುತ್ತಿರುವ ಗುಂಪು ಮತ್ತು ದಲಿತ ಮುಖ್ಯಮಂತ್ರಿ ಬಗ್ಗೆ ಚರ್ಚೆಗಳು ಮುನ್ನೆಲೆಗೆ ಬರುತ್ತಿರುವ ಬಗ್ಗೆ ಕೇಳಿದಾಗ, ಡಿ ಕೆ ಶಿವಕುಮಾರ್ ವಿವಾದಕ್ಕೆ ಸಿಲುಕದಂತೆ ಎಚ್ಚರಿಕೆ ವಹಿಸುತ್ತಿದ್ದಾರೆ. ಅನಗತ್ಯ ವಿಷಯಗಳ ಬಗ್ಗೆ ಮಾತನಾಡುವ ಮೂಲಕ ಅಮೂಲ್ಯ ಸಮಯ ಮತ್ತು ಶಕ್ತಿಯನ್ನು ವ್ಯರ್ಥ ಮಾಡಬೇಡಿ ಎಂದಷ್ಟೇ ಡಿ ಕೆ ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ.

ಈ ಮಧ್ಯೆ, ಮಾಜಿ ಸಚಿವ ಕೆ.ಎನ್. ರಾಜಣ್ಣ ನವೆಂಬರ್ 7 ರಂದು ತುಮಕೂರಿಗೆ ಅಧಿಕೃತ ಭೇಟಿ ನೀಡುವ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರಿಗೆ ಭೋಜನ ಕೂಟವನ್ನು ಆಯೋಜಿಸಲು ಮುಂದಾಗಿದ್ದಾರೆ. ರಾಜಣ್ಣ ಅವರು ಹೆಚ್ಚಿನ ಉಪಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿಗೆ ಒತ್ತಾಯಿಸುತ್ತಿದ್ದಾರೆ.

## ದಾವಣಗೆರೆ ಸೊಸೆ ಎಚ್.ಎಲ್.ಪುಷ್ಪಾಗೆ...

(1ನೇ ಪುಟದಿಂದ)

ಚಲನಚಿತ್ರ /ಕಿರುತೆರೆ: ಪ್ರಕಾಶ್ ರಾಜ್ ದಕ್ಷಿಣ ಕನ್ನಡ, ಶ್ರೀಮತಿ ವಿಜಯಲಕ್ಷ್ಮೀ ಸಿಂಗ್ ಕೊಡಗು

ಆಡಳಿತ/ ವೈದ್ಯಕೀಯ: ಹೆಚ್. ಸಿದ್ದಯ್ಯ ಭಾ.ಆ.ಸೇ(ನಿ) ಬೆಂಗಳೂರು ದಕ್ಷಿಣ (ರಾಮನಗರ)ಡಾ. ಆಲಮ್ಮ ಮಾರಣ್ಣ ತುಮಕೂರು ಡಾ. ಜಯರಂಗನಾಥ್ ಬೆಂಗಳೂರು ಗ್ರಾಮಾಂತರ

ಸಾಹಿತ್ಯ ಕ್ಷೇತ್ರ: ಪ್ರೊ. ರಾಜೇಂದ್ರ ಚೆನ್ನಿ ಶಿವಮೊಗ್ಗ, ತುಂಬಾಡಿ ರಾಮಯ್ಯ ತುಮಕೂರು, ಪ್ರೊ ಅರ್ ಸುನಂದಮ್ಮ ಚಿಕ್ಕಬಳ್ಳಾಪುರ, ಡಾ.ಎಚ್.ಎಲ್ ಪುಷ್ಪ ತುಮಕೂರು, ರಹಮತ್ ತರೀಕೆರೆ ಚಿಕ್ಕಮಗಳೂರು, ಹ.ಮ. ಪೂಜಾರ ವಿಜಯಪುರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಆಯ್ಕೆ ಮಾಡಲಾಗಿದೆ.

# ದೇವಸ್ಥಾನದ ಕಳಸಾರೋಹಣ

ದಾ ನಗರವಾಣಿ ಸುದ್ದಿ

ದಾವಣಗೆರೆ: ತಾಲ್ಲೂಕಿನ ದಿಂಡದಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಆಂಜನೇಯ ದೇವಸ್ಥಾನ ಶ್ರೀ ರಾಮ ದೇವಸ್ಥಾನ ದೇವರ ಪ್ರಾಣ ಪ್ರತಿಷ್ಠಾಪಣೆ ಮತ್ತು ಕಳಸಾರೋಹಣ ಸಮಾರಂಭವನ್ನು ನ.1ರಿಂದ ಮ.3ರವರೆಗೆ ಹಮ್ಮಿಕೊಳ್ಳಲಾಗಿದೆ

50 ಲಕ್ಷ ರೂ ವೆಚ್ಚದಲ್ಲಿ ನಿರ್ಮಿಸಿರುವ ದೇವಾಲಯದಲ್ಲಿ ಮೂರು ದಿನಗಳ ಕಾಲ ದೇವರ ಪ್ರಾರ್ಥನೆ, ಗಂಗಾ ಪೂಜೆ ಹಾಗೂ ಪ್ರಾಣ ಪ್ರತಿಷ್ಠಾಪಣೆಯ ವಿವಿಧ ಕಾರ್ಯಕ್ರಮಗಳು ಜರುಗಲಿದೆ.

## ಬಿಜೆಪಿ ನಾಯಕರು ರಾತ್ರಿಯಾದರೆ...

(1ನೇ ಪುಟದಿಂದ) ಅವರು, "ಸಂಸದ ತೇಜಸ್ವಿ ಸೂರ್ಯ ಅವರು ಪ್ರವೀಣ್ ವಿಚಾರವಾಗಿ ವಾದ ಮಂಡಿಸಿ ಸ್ಟೇ ತಂದಿದ್ದಾರೆ. ಅವರಿಗೆ ನಾನು ಅಭಿನಂದನೆ ಸಲ್ಲಿಸುತ್ತೇನೆ. ಕರ್ನಾಟಕದ ಎಲ್ಲಾ ಅಧಿಕಾರಿಗಳು ಪ್ರಿಯಾಂಕ್ ಖರ್ಗೆಯ ಕೈಗೊಂಬೆಯಾಗಿದ್ದಾರೆ. ಅವರ ತಂದೆ ಕಾಂಗ್ರೆಸ್ ಅಧ್ಯಕ್ಷರಿದ್ದಾರೆಂದು ಇವರು ಬರೆದ ಪತ್ರಕ್ಕೆ ಪರಿಶೀಲಿಸಿ ಎಂದು ಸಿಎಂ ಕೂಡ ಹೇಳುವಂತಾಗಿದೆ. ಅದರರ್ಥ, ಸಿಎಂ ಸಿದ್ದರಾಮಯ್ಯ ಕೂಡ ಈಗ ಪ್ರಿಯಾಂಕ್ ಖರ್ಗೆಯ ಕೈಗೊಂಬೆಯಾಗಿದ್ದಾರೆ" ಎಂದು ಕಿಡಿಕಾರಿದರು.


**ಪತ್ರಿಕೆಗಳಿಗೆ ಸಂಪರ್ಕಿಸಿ 08192–254186**


# ಜಗಳೂರು: 50 ಲಕ್ಷ ರೂ ವೆಚ್ಚದಲ್ಲಿ ಪಶು ಆಸ್ಪತ್ರೆ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ



ದಾ. ನಗರವಾಣಿ ಸುದ್ದಿ

ಜಗಳೂರು, ಅ.30: ಆರ್‌ಡಿಎಫ್ ಯೋಜನೆಯಡಿ ರೂ. 50 ಲಕ್ಷ ವೆಚ್ಚದಲ್ಲಿ ಪಶು ಆಸ್ಪತ್ರೆ ನೂತನ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆಯನ್ನು ಶಾಸಕ ಬಿ.ದೇವೇಂದ್ರಪ್ಪ ನೆರವೇರಿಸಿದರು.

ನಂತರ ಮಾತನಾಡಿದ ಅವರು, 1962 ನಾನು ಜನಿಸಿದ ವರ್ಷದಲ್ಲಿ ಸಾಹುಕಾರ ಮಲ್ಕಪ್ಪ ಅವರು ದೇಣಿಗೆಯಾಗಿ ನಿರ್ಮಿಸಿದ ಪಶು ಆಸ್ಪತ್ರೆ ಕಟ್ಟಡ ಶಿಥಿಲಗೊಂಡ ಹಿನ್ನೆಲೆ, ನನ್ನ ಆಡಳಿತಾವಧಿಯಲ್ಲಿ ನೆಲಸಮಗೊಂಡು, ಅದೇ ನಿವೇಶನದಲ್ಲಿ ನೂತನ ಕಟ್ಟಡ ನಿರ್ಮಾಣಗೊಳ್ಳುತ್ತಿರುವುದು. ಹಿರಿಯರು ಹಾಕಿದ ಅಡಿಪಾಯ ಮುಂದಿನ ಪೀಳಿಗೆಗೆ ಸಾಕ್ಷಿಯಾಗಬೇಕು ಎಂದು ಹೇಳಿದರು.

ಮನುಷ್ಯ ಅನಾರೋಗ್ಯಕ್ಕೆ ತುತ್ತಾದರೆ ಸ್ವ–ಯಂ ಪ್ರೇರಿತನಾಗಿ ಆಸ್ಪತ್ರೆಗೆ ತೆರಳುತ್ತಾನೆ. ಆದರೆ ಮೂಕ ಪ್ರಾಣಿಗಳಿಗೆ ಮನುಷ್ಯನೇ ಆಸರೆಯಾಗಿದ್ದು, ಸನಾತನ ಧರ್ಮದ ಶ್ರೇಷ್ಠ ಪ್ರಾಣಿ ಹಸು, ಸೇರಿದಂತೆ ವಿವಿಧ ಪ್ರಬೇಧದ ಸಾಕು ಪ್ರಾಣಿಗಳಿಗೆ ಪಶು ಆಸ್ಪತ್ರೆ ಅತ್ಯಾವಶ್ಯಕವಾಗಿದೆ ಎಂದರು.

ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಲು ಕ್ರಮ: ಈಗಾಗಲೇ ಕೃಷಿ ಸಚಿವರ ಹಾಗೂ ಅಧಿಕಾರಿಗಳ ಬಳಿ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಲು ಚರ್ಚಿಸಲಾಗಿದೆ. ಮೆಕ್ಕೆಜೋಳ ಬೆಳೆ ಕಟಾವು ಇದೀಗ ಆರಂಭವಾಗಿದ್ದು, ಸರ್ಕಾರದ ಮಾನದಂಡಗಳನ್ವಯ ರೈತರ ಬೇಡಿಕೆಯಂತೆ ಶೀಘ್ರ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಲಾಗುವುದು, ಆತಂಕಬೇಡ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪ.ಪಂ ಅಧ್ಯಕ್ಷ ನವೀನ್ ಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಷೀರ್ ಅಹಮ್ಮದ್, ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ, ಪಶು ಇಲಾಖೆ ಉಪನಿರ್ದೇಶಕ ಡಾ.ಹೆಚ್.ಮಹೇಶ್, ಸಹಾಯಕ ನಿರ್ದೇಶಕಡಾ.ಲಿಂಗರಾಜ್,ಡಾ.ವೀರೇಶ್,ಡಾ.ಷಡಕ್ಷರಿ, ಗುತ್ತಿಗೆದಾರ ರುದ್ರೇಶ್ ಪ.ಪಂ ಸದಸ್ಯರು, ಹಾಗೂ ಮುಖಂಡರುಗಳು ಸೇರಿದಂತೆ ಇತರರು ಇದ್ದರು.

# ಮಹಿಳಾ ವಿಶ್ವ ಕಪ್: ಭಾರತ ಫೈನಲ್‌ಗೆ

(1ನೇ ಪುಟದಿಂದ) ಬಲದಿಂದ 48.3 ಓವರ್‌ಗಳಿಗೆ 4 ವಿಕೆಟ್ ನಷ್ಟಕ್ಕೆ 341 ರನ್ ಗಳಿಸಿ ಗೆಲುವು ಪಡೆಯಿತು. ವಿಶ್ವಕಪ್ ಇತಿಹಾಸದಲ್ಲಿಯೇ ಗರಿಷ್ಠ ಮೊತ್ತದ ರನ್ ಚೇಸ್ ಮಾಡಿದ ತಂಡ ಎಂಬ ವಿಶ್ವದಾಖಲೆಯನ್ನು ಭಾರತ ಬರೆದಿದೆ. ಈ ಗೆಲುವಿನ ಮೂಲಕ ಭಾರತ ಮಹಿಳಾ ತಂಡದ ಚೊಚ್ಚಲ ಮಹಿಳಾ ಏಕದಿನ ವಿಶ್ವಕಪ್ ಗೆಲ್ಲುವ ಕನಸು ಜೀವಂತವಾಗಿ ಉಳಿದುಕೊಂಡಿದೆ. ನ.2 ರಂದು ಇದೇ ಅಂಗಣದಲ್ಲಿ ದಕ್ಷಿಣ ಆಫ್ರಿಕಾ ವಿರುದ್ದ ಭಾರತ ಮಹಿಳಾ ತಂಡ ಫೈನಲ್‌ನಲ್ಲಿ ಕಾದಾಟ ನಡೆಸಲಿದೆ. ಜೆಮಿಮಾ ರೊಡ್ರಿಗಸ್ ಭರ್ಜರಿ ಶತಕ: ಗುರಿ ಹಿಂಬಾಲಿಸಿದ ಭಾರತ ತಂಡ, 13 ರನ್ ಇದ್ದಾಗ ಶಫಾಲಿ ವರ್ಮಾ ಹಾಗೂ 59 ರನ್‌ಗೆ ಸ್ಮೃತಿ ಮಂಧಾನಾ ಅವರ ವಿಕೆಟ್‌ಗಳನ್ನು ಕಳೆದುಕೊಂಡು ಆರಂಭಿಕ ಆಘಾತ ಅನುಭವಿಸಿತ್ತು. ಆದರೆ, ಮೂರನೇ ಕ್ರಮಾಂಕದಲ್ಲಿ ಕ್ರೀಸ್‌ಗೆ ಬಂದು ಕೊನೆಯವರೆಗೂ ಅಜೇಯರಾಗಿ ಬ್ಯಾಟ್ ಮಾಡಿದ ಜೆಮಿಮಾ ರೊಡ್ರಿಗಸ್, 134 ಎಸೆತಗಳಲ್ಲಿ 14 ಬೌಂಡರಿಗಳೊಂದಿಗೆ 127* ರನ್ ಗಳಿಸಿ ಭಾರತ ತಂಡವನ್ನು ಗೆಲ್ಲಿಸಿದರು. ಅಲ್ಲದೆ ನಾಯಕಿ ಹರ್ಮನ್‌ಪ್ರೀತ್ ಕೌರ್ ಜೊತೆ 167 ರನ್‌ಗಳ ನಿರ್ಣಾಯಕ ಜೊತೆಯಾಟವನ್ನು ಆಡಿದರು. ಇದರ ನೆರವಿನಿಂದ ಜೆಮಿಮಾ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ದೀಪ್ತಿ ಶರ್ಮಾ 24 ಹಾಗೂ ರಿಚಾ ಘೋಷ್ 26 ಅವರು ಉಪಯುಕ್ತ ಕಾಣಿಕೆ ನೀಡಿದರು.

338 ರನ್ ಕಲೆ ಹಾಕಿದ್ದ ಆಸ್ಟ್ರೇಲಿಯಾ: ಇದಕ್ಕೂ ಮುನ್ನ ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದ ಆಸ್ಟ್ರೇಲಿಯಾ ತಂಡ ದೊಡ್ಡ ಮೊತ್ತವನ್ನು ಕಲೆ ಹಾಕಿತ್ತು. ಫೋಬೆ ಲಿಚ್‌ಫೀಲ್ಡ್ (119 ರನ್) ಶತಕ ಮತ್ತು ಎಲಿಸ್ ಪೆರಿ (77) ಹಾಗೂ ಆಶ್ಲೆ ಗಾರ್ಡ್ನರ್ (63) ಅವರ ಅರ್ಧಶತಕಗಳ ಬಲದಿಂದ ಆಸ್ಟ್ರೇಲಿಯಾ ಮಹಿಳಾ ತಂಡ 49.5 ಓವರ್‌ಗಳಿಗೆ 338 ರನ್‌ಗಳನ್ನು ಕಲೆ ಹಾಕಿತು. ಆ ಮೂಲಕ ಎದುರಾಳಿ ಭಾರತ ಮಹಿಳಾ ತಂಡಕ್ಕೆ 339 ರನ್‌ಗಳ ಕಠಿಣ ಗುರಿಯನ್ನು ನೀಡಿತ್ತು.

ಫೋಬೆ ಲಿಚ್‌ಫೀಲ್ಡ್ ಭರ್ಜರಿ ಶತಕ: ಆಸ್ಟ್ರೇಲಿಯಾ ಮಹಿಳಾ ತಂಡದ ಪರ ಎಲ್ಲರ ಗಮನ ಸೆಳೆದಿದ್ದು ಆರಂಭಿಕ ಬ್ಯಾಟರ್ ಫೋಬೆ ಲಿಚ್‌ಫೀಲ್ಡ್. ನಾಯಕಿ ಹಾಗೂ ಮತ್ತೊಬ್ಬ ಆರಂಭಿಕ ಆಟಗಾರ್ತಿ ಅಲಿಸಾ ಹೀಲಿ (5) ಅವರು ಬಹುಬೇಗ ವಿಕೆಟ್ ಒಪ್ಪಿಸಿದರು. ಆದರೆ, ಒಂದು ತುದಿಯಲ್ಲಿ ಗಟ್ಟಿಯಾಗಿ ನಿಂತು ಬ್ಯಾಟ್ ಮಾಡಿದ ಲಿಚ್‌ಫೀಲ್ಡ್, ಭಾರತೀಯ ಬೌಲರ್‌ಗಳನ್ನು ಮನಬಂದಂತೆ ದಂಡಿಸಿದರು. ಅವರು ಆಡಿದ 93 ಎಸೆತಗಳಲ್ಲಿ ಮೂರು ಸಿಕ್ಸರ್ ಹಾಗೂ 17 ಬೌಂಡರಿಗಳೊಂದಿಗೆ 119 ರನ್‌ಗಳನ್ನು ಕಲೆ ಹಾಕಿದರು. ಆ ಮೂಲಕ ವುಮೆನ್ಸ್ ವಿಶ್ವಕಪ್ ನಾಕ್‌ಔಟ್ ಪಂದ್ಯದಲ್ಲಿ ಶತಕ ಬಾರಿಸಿದ ಅತ್ಯಂತ ಕಿರಿಯ ಬ್ಯಾಟ್ಸ್‌ವುಮೆನ್ ಎಂಬ ವಿಶ್ವ ದಾಖಲೆಯನ್ನು ಲಿಚ್‌ಫೀಲ್ಡ್ ಬರೆದರು. ಅವರು ತಮ್ಮ 22ನೇ ವಯಸ್ಸಿನಲ್ಲಿ ಈ ದಾಖಲೆ ಬರೆದಿದ್ದಾರೆ. ಜೆಮಿಮಾ ಜೊತೆ ಮತ್ತೊಂದು ತುದಿಯಲ್ಲಿ ಬ್ಯಾಟ್ ಮಾಡಿದ ನಾಯಕಿ ಹರ್ಮನ್‌ಪ್ರೀತ್ ಕೌರ್, 88 ಎಸೆತಗಳಲ್ಲಿ ಎರಡು ಸಿಕ್ಸರ್ ಹಾಗೂ 10 ಬೌಂಡರಿಗಳೊಂದಿಗೆ 89 ರನ್ ಗಳಿಸಿ ಭಾರತದ ಗೆಲುವಿಗೆ ತನ್ನದೇ ಕೊಡುಗೆಯನ್ನು ನೀಡಿದರು.


**ಅಶೋಕ**

DOLBY DIGITAL dts

ದಿನ 4 ಆಟಗಳು

31-10-2025ರಿಂದ ಪ್ರಾರಂಭ

**ಕನ್ನಡ ಚಿತ್ರ**

ticket avabale bookmyshow

ಸಮಯ: ಬೆ:–11ಕ್ಕೆ, ಮ–2ಕ್ಕೆ ಸಂ–6ಕ್ಕೆ,: ರಾ–9ಕ್ಕೆ




ಗೋಲ್ಡನ್ ಕ್ಲಾಸ್: 250 ರೂ, ಬಾಲ್ಕನಿ: 200 ರೂ, ಫಸ್ಟ್ ಕ್ಲಾಸ್: 150 ರೂ

**ಗೀತಾಂಜಲಿ**

DOLBY DIGITAL dts

ದಿನ 4 ಆಟಗಳು

ಭರ್ಜರಿ ಜನಭರಿತ 5ನೇ ವಾರ

**ಕನ್ನಡ ಚಿತ್ರ**




ರಿಷಬ್ ಶೆಟ್ಟಿ, ರುಕ್ಮಿಣಿ ವಸಂತ್ ನಟಿಸಿರುವ ಚಿತ್ರ:
ಕಾಂತಾರ ಅಧ್ಯಾಯ-1

bookmyshow ಮತ್ತು ಪ್ರತಿದಿನ ಚಿತ್ರ ಮಂದಿರದಲ್ಲಿ ಮುಂಗಡವಾಗಿ ಟಿಕೆಟ್ ನೀಡಲಾಗುವುದು.

ಬಾಲ್ಕನಿ: 150 ರೂ
ಫಸ್ಟ್ ಕ್ಲಾಸ್: 120 ರೂ

# 18 ಕೋಟಿ ರೂ ವೆಚ್ಚದಲ್ಲಿ ಜಗಳೂರಿನ ಎಲ್ಲಾ ವಾರ್ಡ್ ಅಭಿವೃದ್ಧಿ: ಶಾಸಕ ದೇವೇಂದ್ರಪ್ಪ ಭರವಸೆ




ದಾ.ನಗರವಾಣಿ ಸುದ್ದಿ

ಜಗಳೂರು, ಅ.30: ರೂ.18 ಕೋಟಿ ವೆಚ್ಚದಲ್ಲಿ ಪಟ್ಟಣದ 18 ವಾರ್ಡಗಳಲ್ಲಿಯೂ ಸಿಸಿ ರಸ್ತೆ, ಚರಂಡಿ, ಮೂಲ ಸೌಕರ್ಯ ಅಭಿವೃದ್ಧಿಪಡಿಸುವೆ ಎಂದು ಶಾಸಕ ಬಿ.ದೇವೇಂದ್ರಪ್ಪ ಭರವಸೆ ನೀಡಿದರು.

ಪಟ್ಟಣದ ದೇವೇಗೌಡ ಬಡಾವಣೆಯಲ್ಲಿ ಎಸ್ ಎಫ್ ಸಿ ಅನುದಾನದಡಿ ರೂ.1.50 ಕೋಟಿ ವೆಚ್ಚದ ಬ್ರಿಡ್ಜ್, ಸಂರಕ್ಷಣಾ ಘಟಕ, ಚರಂಡಿ, ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ರೂ. 8ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಇನ್ನೂ ರೂ.10 ಕೋಟಿ ಅನುದಾನ ತಂದು ಮೂಲ ಸೌಕರ್ಯ ಅಭಿವೃದ್ಧಿಪಡಿಸುವೆ. ನಾನೂ ಪಟ್ಟಣದ ಅಶ್ವಿನಿ ಬಡಾವಣೆಯಲ್ಲಿ ನಿವಾಸಿಯಾಗಿದ್ದ ವೇಳೆ ಸಾರ್ವಜನಿಕರು ಸಂಚಾರಕ್ಕೆ ಹರಸಾಹಸ ಪಡುವುದನ್ನು ಪ್ರತ್ಯಕ್ಷವಾಗಿ ಕಂಡಿರುವುದನ್ನು ಮನಗಂಡು ಪಟ್ಟಣದ ಅಭಿವೃದ್ಧಿಗೆ ಆದ್ಯತೆ ನೀಡಿರುವೆ. ಸಾರ್ವಜನಿಕರು ಕಾಮಗಾರಿ ವೇಳೆ ಗುತ್ತಿಗೆದಾರರು, ಅಧಿಕಾರಿಗಳಿಗೆ ಸಹಕಾರ ನೀಡಬೇಕು ಎಂದು ಮನವಿಮಾಡಿದರು.

**ಪಟ್ಟಣದ ಮುಖ್ಯ ರಸ್ತೆ 69 ಅಡಿ ವಿಸ್ತರಣೆ ಖಚಿತ: 'ಮಲ್ಪೆ ಮೊಳಕಾಲ್ಮೂರು ರಾಜ್ಯ ಹೆದ್ದಾರಿಯ ಪಟ್ಟಣದ ಮುಖ್ಯ ರಸ್ತೆ ವಿಸ್ತರಣೆ ಪ್ರಕ್ರಿಯೆಯಲ್ಲಿ ವರ್ತಕರ ಮನವಿಯಂತೆ 50ಅಡಿ ಸ್ವಯಂ ಪ್ರೇರಿತ ಕಟ್ಟಡ ತೆರವಿಗೆ ಕಾಲಾವಕಾಶ ನೀಡಲಾಗಿತ್ತು. ಆದರೆ ಅವರಿಂದ ಸಕಾರಾತ್ಮಕ ಪ್ರತಿಕ್ರಿಯೆ ಬರದಕಾರಣ, ರಾಜ್ಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ನಿಯಮಾವಳಿಯಂತೆ ಸಮರ್ಪಕ ಕಟ್ಟಡಗಳ ಮಾಲೀಕರಿಗೆ ರೂ.60 ಕೋಟಿ ಅನುದಾನ ಪರಿಹಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಶೀಘ್ರದಲ್ಲಿ ಪರಿಹಾರ ಕೊಟ್ಟು ಎರಡೂ ಬದಿ 69 ಮುಖ್ಯ ರಸ್ತೆ ವಿಸ್ತರಣೆಗೊಳಿಸುವುದು ಖಚಿತ'.**

**– ಬಿ.ದೇವೇಂದ್ರಪ್ಪ, ಶಾಸಕ ಜಗಳೂರು,**

ಪಟ್ಟಣದ ಅಭಿವೃದ್ಧಿಗೆ ಪಕ್ಷಾತೀತವಾಗಿ ಸಹಕರಿಸಿ: ಪಟ್ಟಣ ಪಂಚಾಯಿತಿಯಲ್ಲಿ ವಿರೋಧಪಕ್ಷದ ಆಡಳಿತವಿದ್ದು ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸದೆ ನನಗೆ ಬೇಸರ ತಂದಿತ್ತು. ಇದೀಗ ಪ.ಪಂ ಅಧ್ಯಕ್ಷರು, ಸದಸ್ಯರುಗಳು ಭೂಮಿ ಪೂಜೆಯಲ್ಲಿ ಪಾಲ್ಗೊಂಡಿರುವುದು ಸಂತಸ ತಂದಿದೆ. ಶಿಷ್ಟಾಚಾರವಿರಲಿ ಇಲ್ಲದಿರಲಿ ಅಭಿವೃದ್ಧಿ ಕೆಲಸಗಳಿಗೆ ಪಕ್ಷಾತೀತವಾಗಿ ಸಹಕರಿಸಬೇಕು ಎಂದು ತಿಳಿಸಿದರು.

ಕಳಪೆ ಕಾಮಗಾರಿ ನಡೆಸಿದರೆ ಕಾನೂನು ಕ್ರಮ: ಎಸ್ಟಿಮೇಶನ್ ಪ್ರಕಾರ ಕೈಗೊಂಡಿರುವ ಕಾಮಗಾರಿಗಳು ಕಳಪೆಯಾದರೆ ಕಾನೂನು ಕ್ರಮ ಜರುಗಿಸುವೆ, ಗುತ್ತಿಗೆದಾರರ ಪರವಾನಿಗೆ ರದ್ದುಪಡಿಸಲು ಶಿಫಾರಸ್ಸು ಮಾಡುವೆ. ತ್ವರಿತಗತಿಯಲ್ಲಿ ಗುಣಮಟ್ಟದ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಸಚಿವ ಸಂಪುಟದಲ್ಲಿ ನನಗೆ ಉತ್ತಮ ಸಂಪರ್ಕವಿದ್ದು, ವಿವಿಧ ಇಲಾಖೆಗಳಿಂದ ಅಧಿಕ ಅನುದಾನವನ್ನು ಕ್ಷೇತ್ರಕ್ಕೆ ತರುವೆ. ಕ್ಷೇತ್ರದ 48 ಮಸೀದಿಗಳನ್ನು ತಲಾ ರೂ.5 ಲಕ್ಷ ವೆಚ್ಚದಲ್ಲಿ ಒಟ್ಟು ರೂ.3 ಕೋಟಿ ಅನುದಾನದಡಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಷೀರ್ ಅಹಮ್ಮದ್, ಪ.ಪಂ ಅಧ್ಯಕ್ಷ ನವೀನ್ ಕುಮಾರ್, ಸದಸ್ಯರಾದ ಲಲಿತಮ್ಮ, ನಿರ್ಮಲ ಕುಮಾರಿ, ಶಕೀಲ್ ಅಹಮ್ಮದ್, ಮಹಮ್ಮದ್ ಅಲಿ, ಮಂಜುನಾಥ್, ರಮೇಶ್ ನಾಮ ನಿರ್ದೇಶಿತ ಸದಸ್ಯರಾದ ತಾನಾಜಿಗೋಸಾಯಿ, ಕುರಿಜಯ್ಯಣ್ಣ, ಪ.ಪಂ ಮುಖ್ಯಾಧಿಕಾರಿ ಲೋಕ್ಯಾನಾಯ್ಕ ,ಕೆ-ಐಆರ್ ಡಿಎಲ್ ಎಇಇ ಶಿವಮೂರ್ತಿ ನಾಯ್ಕ, ಎಇ ವಿಜಯಕುಮಾರ್ ನಾಯ್ಕ, ಮುಖಂಡರಾದ ಬಿ.ಮಹೇಶ್ವರಪ್ಪ, ರಮೇಶ್, ಶಿಲ್ಪಾ, ಜಯಲಕ್ಷ್ಮಿ, ಹರೀಶ್ ಕೆಚ್ಚೇನಹಳ್ಳಿ, ಸಣ್ಣ ಸೂರಜ್ಜ, ಚಿತ್ತಪ್ಪ, ಆಪ್ತ ಸಹಾಯಕರಾದ ಗೌಸ್ ಅಹಮ್ಮದ್, ಮಧುಶಂಕರ್ ಸೇರಿದಂತೆ ಇತರರು ಇದ್ದರು.

## ರಾಣಿಬೆನ್ನೂರು: ನಾಳೆ ರಕ್ತದಾನ ಶಿಬಿರ

ರಾಣೇಬೆನ್ನೂರು, ಅ.30: ಸುಕ್ಷೇತ್ರ ಐರಣಿ ಹೊಳೆಮಠದ ಶ್ರೀ ಗುರು ಮುಪ್ಪಿನಾರ್ಯ ಸ್ವಾಮೀಜಿಯವರ ಸವಿ ನೆನಪಿಗೋಸ್ಕರ ಹಾಗೂ ದಿ. ತಿರಕಮ್ಮ ದಿ. ಮಲ್ಲಪ್ಪ ಕರೂರ ಇವರ ಸ್ಮರಣಾರ್ಥ ಸ್ಥಳೀಯ ಬಸ್ ನಿಲ್ದಾಣದಲ್ಲಿರುವ ಭುವನೇಶ್ವರಿ ಆಟೋ ನಿಲ್ದಾಣದ ಚಾಲಕರು, ಮಾಲೀಕರು, ಹಾಗೂ ಕರೂರು, ಪೂಜಾರ, ಹಲಗೇರಿ ವಂಶಸ್ಥರು ಕನ್ನಡ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1 ರಂದು ರಕ್ತದಾನ ಶಿಬಿರ ಹಾಗೂ ಅನ್ನ ಸಂತರ್ಪಣೆ ಏರ್ಪಡಿಸಿದ್ದಾರೆ.

ಕಾರಣ ರಕ್ತ ದಾನಿಗಳು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಶಿಬಿರದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಓದುಗರ ಗಮನಕ್ಕೆ**

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸ ಪೂರ್ಣವೇ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು, ಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀ ರಾತುದಾರ ರೊಡನೆಯೇ ವ್ಯವಹ ರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

# ಅನಿರ್ದಿಷ್ಟಾವಧಿ ಪ್ರತಿಭಟನೆ ಸುಖಾಂತ್ಯ



ದಾ ನಗರವಾಣಿ ಸುದ್ದಿ

ಕೊಟ್ಟೂರು: ಪಟ್ಟಣವನ್ನು ತಾಲ್ಲೂಕು ಕೇಂದ್ರವೆಂದು ಘೋಷಿಸಿ ಏಳೆಂಟು ವರ್ಷಗಳಾದರೂ ವಿವಿಧ ಇಲಾಖಾ ಕಚೇರಿಗಳು ಆರಂಭವಾಗದಿರುವುದನ್ನು ಖಂಡಿಸಿ ಪಟ್ಟಣದ ತಹಶೀಲ್ದಾರ್ ಕಚೇರಿ ಎದುರು ಭಾರತ ಕಮ್ಯೂನಿಷ್ಟ್ ಪಕ್ಷ (ಸಿಪಿಐ) ಹಾಗೂ ವಿವಿಧ ಸಂಘಟನೆಗಳ ಸಹಯೋಗದೊಂದಿಗೆ ನಡೆಯುತ್ತಿದ್ದ ಅನಿರ್ದಿಷ್ಟಾವಧಿ ಪ್ರತಿಭಟನೆ ಶಾಸಕ ಕೆ ನೇಮಿರಾಜ್ ನಾಯ್ಕ ಅವರಿಗೆ ಮನವಿ ಸಲ್ಲಿಸುವ ಮೂಲಕ ಸುಖಾಂತ್ಯಗೊಂಡಿತು.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕ ನೇಮಿರಾಜ್ ನಾಯ್ಕ ಅವರು, ಕೊಟ್ಟೂರು ತಾಲೂಕಿನ ಎಲ್ಲಾ ಕಚೇರಿ ಗಳನ್ನು ತೆರೆಯಲು ಚಳಿಗಾಲ ಅಧಿವೇಶನದಲ್ಲಿ ಸದನದಲ್ಲಿ ಧ್ವನಿ ಎತ್ತಿ ಕಚೇರಿಗಳನ್ನು ಪ್ರಾರಂಭಿಸಲು ಒತ್ತಾಯಿಸುತ್ತೇನೆ. ಪ್ರಮುಖ ಬೇಡಿಕೆಗಳಾದ ಕ್ಷೇತ್ರ ಶಿಕ್ಷಣ ಇಲಾಖೆ, ಡಿಗ್ರಿ ಕಾಲೇಜ್, ಸಬ್ ರಿಜಿಸ್ಟರ್ ಕಚೇರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ಕಚೇರಿ ಸ್ಥಾಪನೆಗೆ ಭರವಸೆ ನೀಡಿದರು.

ಕೊಟ್ಟೂರು ತಹಸಿಲ್ದಾರ್ ಅಮರೇಶ್ ಮಾತನಾಡಿ, ಕೊಟ್ಟೂರಿನಲ್ಲಿ ವಿವಿಧ ಸರ್ಕಾರಿ ಕಚೇರಿಗಳನ್ನು ತೆರೆಯಲು ಭಾರತ ಕಮಿನಿಸ್ಟ್ ಪಕ್ಷ ನಡೆಸುತ್ತಿರುವ ಪ್ರತಿಭಟನೆಯನ್ನು ಮತ್ತು ಹಲವು ಬೇಡಿಕೆಗಳನ್ನು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದರು.

ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ತಾಲ್ಲೂಕು ಅಧ್ಯಕ್ಷ ಕೊಟ್ರೇಶ್ ತೆಗ್ಗಿನಕೇರಿ ಮಾತನಾಡಿ, ಕೊಟ್ಟೂರು ತಾಲೂಕಿನಲ್ಲಿ ಸೋಲಾರ್ ಕಂಪನಿಗಳ ಹಾವಳಿ ಹೆಚ್ಚಾಗುತ್ತಿದ್ದು ಫಲವತ್ತತೆಯ ಕೃಷಿ ಭೂಮಿಯನ್ನು ರೈತರಿಂದ ಕಬಳಿಸಿ ರೈತರನ್ನು ಬೀದಿಪಾಲು ಮಾಡುತ್ತಿದ್ದಾರೆ. ಕೊಟ್ಟೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮತ್ತು ಕೆಲವು ಗ್ರಾಮ ಪಂಚಾಯತಿಗಳಲ್ಲಿ ಅವ್ಯವಹಾರ ನಡೆದಿದ್ದು ಈ ಅವ್ಯವಹಾರ ಬಗ್ಗೆ ಲೋಕಾಯುಕ್ತ ಅಧಿಕಾರಿಗಳ ಸಮ್ಮುಖದಲ್ಲಿ ತನಿಖೆ ನಡೆಸಬೇಕು ಎಂದರು.

ಕೊಟ್ಟೂರು ತಾಲೂಕಿನ 14 ಗ್ರಾಮ ಪಂಚಾಯತಿಗಳಲ್ಲಿ ಅನೇಕ ಮಹಿಳೆಯರು ಜಾಗ ವಸತಿ ಇಲ್ಲದೆ ಪರದಾಡುತ್ತಿದ್ದಾರೆ. ಕಾಳಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅನೇಕ ದೇವದಾಸಿ ಮಹಿಳೆಯರಿಗೆ ಆರೇಳು ತಿಂಗಳು ಮಾಸಾಸನ ಬಂದಿಲ್ಲ ಹಾಗೂ ಅದೇ ಗ್ರಾಮದ ದೇವದಾಸಿ ಜಾಗ ವಸತಿ ಇಲ್ಲದೆ ಗುಡಿಸಲಿನಲ್ಲಿ ವಾಸ ಮಾಡುತ್ತಿದ್ದೇವೆ ಎಂದು ದೇವದಾಸಿ ಮಹಿಳೆ ದುರುಗಮ್ಮ ಅವರು ತಮ್ಮ ಅಳಲನ್ನು ತೋಡಿಕೊಂಡರು.

ಕೊಟ್ಟೂರು ತಾಲ್ಲೂಕಿನ ಅಭಿವೃದ್ಧಿಗೆ ಸಂಬಂಧಿಸಿದಂತೆ ಭಾರತ ಕಮ್ಯೂನಿಸ್ಟ್ ಪಕ್ಷದ ನೇತೃತ್ವದಲ್ಲಿ ನಿರಂತರವಾಗಿ ಮನವಿ ಕೊಟ್ಟರೂ ತಹಶಿಲ್ದಾರರ ಕಚೇರಿ ಎದರು ಪ್ರತಿಭಟನೆ ನಡೆ-ಯುತ್ತಿದ್ದರು, ಕೊಟ್ಟೂರು ತಾಲ್ಲೂಕಿನ ಉಜ್ಜಯಿನಿಯ ಮಠಕ್ಕೆ ಆಗಮಿಸಲು ಬಿಡುವು ಮಾಡಿಕೊಂಡ ವಿಜಯನಗರ ಜಿಲ್ಲಾಧಿಕಾರಿಗಳಿಗೆ ಸ್ವಲ್ಪ ದೂರದಲ್ಲೆ ನಡೆಯುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಆಗಮಿಸಲು ಸಮಯವಿರಲಿಲ್ಲವೇ? ಜಿಲ್ಲಾಡಳಿತದ ನಿರ್ಲಕ್ಷ್ಯವನ್ನು ಭಾರತ ಕಮ್ಯೂನಿಸ್ಟ್ ಪಕ್ಷದ ವಿಜಯನಗರ ಜಿಲ್ಲಾ ಮಂಡಳಿ ಖಂಡಿಸುತ್ತದೆ ಎಂದರು.

# ಯುವಜನತೆಗೆ ದಾರ್ಶನಿಕರ ಪ್ರೇರಣೆ ಗುರಿ ಸಾಧಿಸಲು ದಾರಿದೀಪ: ಶ್ರೀಪತಿ ಗಿನ್ನಿ



ದಾ ನಗರವಾಣಿ ಸುದ್ದಿ

ಹರಿಹರ: ಜೀವನದಲ್ಲಿ ಯಶಸ್ಸು ಸಾಧಿಸಿದ ದಾರ್ಶನಿಕರು, ವಿಜ್ಞಾನಿಗಳಂತಹ ಮಹನೀಯರಿಂದ ಯುವಜನತೆ ಪ್ರೇರಣೆ ಪಡೆದರೆ ಜೀವನದಲ್ಲಿ ಉನ್ನತ ಗುರಿ ಸಾಧಿಸಲು ದಾರಿದೀಪವಾಗುತ್ತದೆ ಎಂದು ಹರಿಹರ ನಗರ ಪೋಲಿಸ್ ಠಾಣೆಯ ಪಿಎಸ್ಐ ಶ್ರೀಪತಿ ಗಿನ್ನಿ ಅವರು ಸಲಹೆ ನೀಡಿದರು.

ದಾವಣಗೆರೆ ಗ್ರಾಮಾಂತರ ಪೊಲೀಸ್ ಉಪವಿಭಾಗದ ಸಹಯೋಗದಲ್ಲಿ ಗುರುವಾರ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ರಾಷ್ಟ್ರೀಯ ಏಕತಾ ದಿವಸ್ ಆಚರಣೆಯಲ್ಲಿ ಅವರು ಮಾತನಾಡಿದರು.

ಸಾಧಕರ ಜೀವನ ಪಥವನ್ನು ಮಾದರಿಯಾಗಿಸಿ ಕೊಂಡರೆ , ಅವರು ಎದುರಿಸಿದ ಸಂಕಷ್ಟಗಳು, ಕಠಿಣ ಪರಿಶ್ರಮ, ನಿಷ್ಠೆ ಮತ್ತು ದೃಢಸಂಕಲ್ಪವು ಸದಾ ಸ್ಫೂರ್ತಿದಾಯಕವಾಗಿರುತ್ತವೆ. ಅವರ ಜೀವನದಿಂದ ನಾವು ಕಠಿಣ ಪರಿಸ್ಥಿತಿಗಳಲ್ಲೂ ಹೋರಾಡುವ ಶಕ್ತಿ, ಶಿಸ್ತು, ನೈತಿಕತೆ ಮತ್ತು ಸಮಾಜ ಸೇವೆಯ ಮನೋಭಾವವನ್ನು ಕಲಿಯಬಹುದು ಎಂದರು.

ಯುವಜನತೆಯಲ್ಲಿ ಮೊಬೈಲ್ ಬಳಕೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಇದು ಹಲವು ಬಗೆ-ಯ ಅಪರಾಧ ಪ್ರಕರಣಗಳಿಗೆ ಕಾರಣವಾಗುತ್ತಿದೆ. ಆಧುನಿಕ ತಂತ್ರಜ್ಞಾನವನ್ನು ಎಚ್ಚರಿಕೆಯಿಂದ ಬಳಸಬೇಕು, ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಶೈಕ್ಷಣಿಕ ಉನ್ನತಿಗೆ ಉಪಯೋಗಿಸಬೇಕು. ಅನಾವಶ್ಯಕ ಬಳಕೆ ಜೀವನದಲ್ಲಿ ಅನಾಹುತಕ್ಕೆ ಕಾರಣವಾಗಬಹುದು ಎಂದು ಎಚ್ಚರಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಎನ್. ರಮೇಶ್ ದಾರ್ಶನಿಕರು ಮತ್ತು ಸಾಧಕರ ಜೀವನ ಯುವಕರಿಗೆ ಮಾದರಿಯಾಗಬೇಕು. ಅವರ ಚಿಂತನೆಗಳಿಂದ ಪ್ರೇರಣೆ ಪಡೆದು ಭವಿಷ್ಯವನ್ನು ನಿರ್ಮಿಸಿಕೊಳ್ಳಬೇಕು ಎಂದರು.

ವಲ್ಲಭಭಾಯಿ ಪಟೇಲ್ ಅವರ ಸಾಧನೆ ಕುರಿತ ಪ್ರಬಂಧ ಸ್ಪರ್ಧೆಯಲ್ಲಿ ಕ್ರಮವಾಗಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿನಿಯರಾದ ಅರ್ಪಿತಾ ಎನ್.ಎಚ್., ಶೃತಿ ಹಾಗೂ ಲಕ್ಷ್ಮಿ ಎಂ. ಇವರಿಗೆ ಬಹುಮಾನ ವಿತರಿಸಲಾಯ್ತು. ಎಎಸ್ಐ ಮಹಮದ್ ಜಬಿಉಲ್ಲಾ, ಸಾಂಸ್ಕೃತಿಕ ವಿಭಾಗದ ಸಂಯೋಜ-ಕ ಡಾ. ಅನಂತನಾಗ್ ಎಚ್.ಪಿ., ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಹನುಮಂತಪ್ಪ ಕೆ.ವೈ., ದಿಲೀಪ್, ಸಹಸಂಯೋಜಕ ಅಬ್ದುಲ್ ಬಷೀರ್, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಮಮತಾ ಹೆಚ್. ಸಾಹುಕಾರ ಇತರರರಿದ್ದರು.

# ಕೊಟ್ಟೂರಿನಲ್ಲಿ ಆರೆಸ್ಸೆಸ್ ಪಥಸಂಚಲನ



ದಾ ನಗರವಾಣಿ ಸುದ್ದಿ

ಕೊಟ್ಟೂರು: ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಮೂರನೇ ವರ್ಷದ ಆಚರಣೆಯ ಅಂಗವಾಗಿ ಕೊಟ್ಟೂರು ಪಟ್ಟಣದಲ್ಲಿ ಪಥ ಸಂಚಲನ ನಡೆಯಿತು.

ಸಹಸ್ರಾರು ಸಂಖ್ಯೆಯಲ್ಲಿ ಬಂದಿದ್ದ ಸ್ವಯಂ ಸೇವಕರು ಶಿಸ್ತು ಬದ್ಧರಾಗಿ ಹೆಜ್ಜೆ ಹಾಕುವ ಮೂಲಕ ಪರಂಪರೆಯ ಸಾರವನ್ನು ನಗರದ ಬೀದಿಬೀದಿಗಳಲ್ಲಿ ಸಾರಿದರು. ಎಪಿಎಂಸಿ ಆವರಣದ ಪಕ್ಕದಲ್ಲಿರುವ ಚೆನ್ನ ಮಲ್ಲಪ್ಪನವರ ಆವರಣದಿಂದ ಪ್ರಾರಂಭಗೊಂಡ ಪಥ ಸಂಚಲನ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಡೋಣೂರು ಜಾನು ಕೋಟಿ ಮಠದ ಆಭರಣದಲ್ಲಿ ಕೊನೆಗೊಂಡಿತು.

ಪಥ ಸಂಚಲನದ ನಂತರ ಸಮರೂಪ ಅಂಗವಾಗಿ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿದರು. ಇದೇ ಸಂದರ್ಭದಲ್ಲಿ ಬಿಜೆಪಿಯ ನಿಕಟ ಪೂರ್ವ ಜಿಲ್ಲಾಧ್ಯಕ್ಷ ಚನ್ನಬಸವನಗೌಡ ಪಾಟೀಲ್, ಹಗರಿ ಬೊಮ್ಮನಹಳ್ಳಿ ಮಂಡಲ ಅಧ್ಯಕ್ಷ ಪ್ರಕಾಶ್ ಬಣಕಲ್ಲು, ಕೊಟ್ಟೂರು ಬಿಜೆಪಿ ಘಟಕದ ಅಧ್ಯಕ್ಷ ಪಂಪಾಪತಿ, ಅಂಗಡಿ ವೀರೇಶ್, ಗೌಡ್ರು ಬೋರ್ವೆಲ್, ತಿಪ್ಪೇಸ್ವಾಮಿ ಹಾಗೂ ಹಿರಿಯ ಮುಖಂಡರು ಭಾಗವಹಿಸಿದ್ದರು.

# ನಾಳೆ ಕೋಳಿವಾಡ ಜನ್ಮದಿನ



ದಾ ನಗರವಾಣಿ ಸುದ್ದಿ

ರಾಣಿಬೆನ್ನೂರು, ಅ.30: ಕೆ.ಬಿ.ಕೋಳಿವಾಡ ಅಭಿಮಾನಿ ಬಳಗಜ ವತಿಯಿಂದ ಮಾಜಿ ವಿಧಾನಸಭಾಧ್ಯಕ್ಷ ಕೆ.ಬಿ.ಕೋಳಿವಾಡರ ಹುಟ್ಟು ಹಬ್ಬವನ್ನು ನ. 1 ರಂದು ಇಲ್ಲಿನ ವಿನಾಯಕ ನಗರದ ವಿನಾಯಕ ದೇವಸ್ಥಾನ ಬಳಿ ಇರುವ ಕೆ.ಬಿ.ಕೋಳಿವಾಡ ಸಭಾಭವನ (ಕಾಂಗ್ರೇಸ್ ಕಚೇರಿ) ಯಲ್ಲಿ ಆಚರಿಸಲಾಗುವುದು.

ಪ್ರತೀ ವರ್ಷ ಸನ್ಮಾನ್ಯರ ಹುಟ್ಟು ಹಬ್ಬದ ಪ್ರಯುಕ್ತ ಪಿ. ಕೆ. ಕೆ. ಇನಿಷಿಯೇಟಿವ್ ವತಿಯಿಂದ ಜನಸೇವಾ ಕಾರ್ಯಕ್ರಮ ಹಮ್ಮಿಕೊಳ್ಳುತ್ತಾ ಬಂದಿದ್ದು, ಈ ವರ್ಷವೂ ಕೂಡಾ ಸಾರ್ವಜನಿಕರಿಗೆ ಉಪಯೋಗವಾಗಲೆಂದು ಪಾರ್ಥಿವ ಶರೀರಗಳನ್ನು ಸಾಗಿಸಲು ಶ್ರದ್ಧಾಂಜಲಿ ವಾಹನ ಮತ್ತು ಶಾಲಾ ಮಕ್ಕಳ ಅನುಕೂಲಕ್ಕಾಗಿ ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ರೋಬೋಟ್ ಟೀಚರ್ ಲೋಕಾರ್ಪಣೆ ಮಾಡಲಾಗುತ್ತಿದೆ. ಆದ್ದರಿಂದ ಸಾರ್ವಜನಿಕರು, ಅಭಿಮಾನಿಗಳು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಅಭಿಮಾನಿ ಬಳಗವು ಪ್ರಕಟಣೆಯಲ್ಲಿ ತಿಳಿಸಿದೆ.

## ಬೀದಿ ಬದಿ ಚಹ ಸೇವಿಸಿ 2000 ರೂ ನೀಡಿದ ಶಾಸಕ ದೇವೇಂದ್ರಪ್ಪ



ದಾ.ನಗರವಾಣಿ ಸುದ್ದಿ

ಜಗಳೂರು,ಅ.30: ಪಟ್ಟಣದ ಪೋಲೀಸ್ ಠಾಣೆ ಪಕ್ಕದ ರಸ್ತೆ ಬದಿ ಶೆಡ್ ಅಂಗಡಿಬಳಿ ನಿಂತು ಚಹಾ ಸೇವಿಸಿ ಶಾಸಕ ಬಿ.ದೇವೇಂದ್ರಪ್ಪ ಅವರು ಸರಳ ಸಜ್ಜನಿಕೆ ಮೆರೆದರು.

ಪಶು ಆಸ್ಪತ್ರೆ ನೂತನ ಕಟ್ಟಡದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಪಟ್ಟಣ ಪಂಚಾಯಿತಿ ಸದಸ್ಯರು ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರುಗಳೊಂದಿಗೆ ಶೆಡ್ ಅಂಗಡಿ ಬಳಿ ತೆರಳಿ, ಚಹಾ ಸೇವಿಸಿ ಚಹಾ ಅಂಗಡಿ ಮಾಲಿಕರಾದ ಪಾರ್ವತಮ್ಮ ಅವರಿಗೆ ರೂ.2000 ದೇಣಿಗೆ ನೀಡಿ, ಉತ್ತಮ ವ್ಯಾಪಾರ ಸಾಗಲಿ ಬೀದಿಬದಿ ವ್ಯಾಪಾರಿಗಳಿಗೆ ಧ್ವನಿಯಾಗುವೆ ಎಂದು ಶುಭ ಹಾರೈಸಿದರು.

ಜನಪ್ರತಿನಿಧಿಗಳೆಂದರೆ ಪಟ್ಟಣ ನಗರ ಪ್ರದೇಶಗಳಲ್ಲಿ ಪ್ರತಿಷ್ಠಿತ ಹೋಟೆಲ್ ಹುಡುಕುವ ಕಾಲಘಟ್ಟದಲ್ಲಿ ಅಂತರ,ಅಂತಸ್ತು ಕಾಪಾಡಿಕೊಳ್ಳುವ ರಾಜಕಾರಣಿಗಳ ಮಧ್ಯೆ ಆರ್ಥಿಕ ಶಕ್ತಿಯಿದ್ದರೂ ಸರಳತೆಯಿಂದ ಜನಸಾಮಾನ್ಯರೊಂದಿಗೆ ಬೆರೆಯುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾದರು.

# ನಗರದಲ್ಲಿಂದು ರಾಷ್ಟ್ರೀಯ ಏಕತಾ ದಿನ; ಏಕತಾ ಓಟ

ದಾವಣಗೆರೆ, ಅ.30 : ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಂಗವಿಕಲ ವ್ಯಕ್ತಿಗಳ ಸಬಲೀಕರಣ ಇಲಾಖೆಯ ದಾವಣಗೆರೆ ಸಂಯೋಜಿತ ಪ್ರಾದೇಶಿಕ ಕೇಂದ್ರದಿಂದ ಭಾರತದ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ "ರಾಷ್ಟ್ರೀಯ ಏಕತಾ ದಿನ ಪ್ರಯುಕ್ತ ಅ.31 ಬೆಳಿಗ್ಗೆ 9 ರಿಂದ 10.30 ರವರೆಗೆ ದಾವಣಗೆರೆಯ ಆಂಜನೇಯ ಹತ್ತಿ ಗಿರಣಿ ಪ್ರದೇಶದಲ್ಲಿ ಏಕತಾ ಓಟವನ್ನು ಆಯೋಜಿಸಲಾಗಿದೆ. ಎಂದು ಸಿಆರ್‌ಸಿ ನಿರ್ದೇಶಕರಾದ ಮಾರುತಿ ಕೃಷ್ಣಗೌಡ ತಿಳಿಸಿದ್ದಾರೆ.

## ಆರೆಎಸ್ಸೆಸ್ ಪಥಸಂಚಲನದಲ್ಲಿ ಭಾಗಿ...

(1ನೇ ಪುಟದಿಂದ) 'ಯಾವುದೇ ರೀತಿಯ ಬೆದರಿಕೆಯು, ಆರ್‌ಎಸ್‌ಎಸ್‌ನ ರಾಷ್ಟ್ರ ನಿರ್ಮಾಣದ ಆದರ್ಶಗಳನ್ನು ತಡೆಯಲು ಸಾಧ್ಯವಿಲ್ಲ ಎಂಬ ಎಚ್ಚರಿಕೆಯನ್ನು ಕಾಂಗ್ರೆಸ್ ಸರ್ಕಾರಕ್ಕೆ ನೀಡಿದಂತಾಗಿದ್ದು, ರಾಜ್ಯ ಸರ್ಕಾರಕ್ಕೆ ತೀವ್ರ ಮುಖಭಂಗವಾಗಿದೆ. ಈ ಸಂದರ್ಭದಲ್ಲಿ ಸಹಕಾರ ನೀಡಿರುವ ಹಿರಿಯ ವಕೀಲರಾದ ಪ್ರಭುಲಿಂಗ ನಾವದಗಿ ಅವರಿಗೆ ಧನ್ಯವಾದಗಳು' ಎಂದು ಅವರು ಹೇಳಿದರು.

# ವೈದ್ಯಕೀಯ ಕಾಲೇಜಿನ ವಿಷಯ ಕುರಿತು ಸಭೆ: ಚಳ್ಳಕೆರೆ ಶಾಸಕ ರಘುಮೂರ್ತಿ ಭಾಗಿ




ದಾ ನಗರವಾಣಿ ಸುದ್ದಿ

ಬೆಂಗಳೂರು ನಗರದ ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಇಂದು, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ಮತ್ತು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ರವರ ಅಧ್ಯಕ್ಷತೆಯಲ್ಲಿ ನಡೆದ ವೈದ್ಯಕೀಯ ಕಾಲೇಜಿನ ವಿಷಯದ ಕುರಿತು ಹಾಗೂ ನೂತನ ಕೋರ್ಸ್‌ಗಳನ್ನು ಪ್ರಾರಂಭಿಸುವ ಕುರಿತು ನಡೆದ ಮಹತ್ವದ ಸಭೆಯಲ್ಲಿ ಚಳ್ಳಕೆರೆ ಶಾಸಕ ರಘುಮೂರ್ತಿ ಪಾಲ್ಗೊಂಡು, ಹಲವು ಮಹತ್ವದ ವಿಷಯಗಳು ಕುರಿತು ಚರ್ಚಿಸಿದದರು.

ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿಡಿ ಸುಧಾಕರ್ ಅವರು, ಉನ್ನತ ಶಿಕ್ಷಣ ಹಾಗೂ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಇಲಾಖೆ ತಜ್ಞರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಹರಪನಹಳ್ಳಿ ಪುರಸಭೆ ಸಾಮಾನ್ಯ ಸಭೆ ಅಕ್ರಮ ನಲ್ಲಿಗಳ ವಿರುದ್ಧ ಕ್ರಮಕ್ಕೆ ಆಗ್ರಹ



ದಾ ನಗರವಾಣಿ ಸುದ್ದಿ

ಹರಪನಹಳ್ಳಿ: ಇಲ್ಲಿಯ ಪುರಸಭೆಯಲ್ಲಿ ಗುರುವಾರ ಸಾಮಾನ್ಯ ಸಭೆ ಜರುಗಿತು.

ಹಿರಿಯ ಸದಸ್ಯ ಎಂ.ವಿ.ಅಂಜಿನಪ್ಪ ಮಾತನಾಡಿ ನಮ್ಮ ಸದಸ್ಯತ್ವ ಅವಧಿ ಮುಗಿಯುತ್ತದೆ ಎಂದು ಕೆಲಸ, ಕಾರ್ಯ ನಿರ್ಲಕ್ಷ್ಯ ಮಾಡಬೇಡಿ, ಈಗಿರುವ ಸದಸ್ಯರಲ್ಲಿ ಶೇ.50 ರಷ್ಟು ಸದಸ್ಯರು ಗೆದ್ದು ವಾಪಾಸು ಇಲ್ಲಿಗೆ ಬರುತ್ತಾರೆ, ಜನರ ಕೆಲಸ ಸರಿಯಾಗಿ ಮಾಡಿ, ತಾಳ್ಮೆಯಿಂದ ಜನರಿಗೆ ಸ್ಪಂದಿಸಿ ಎಂದು ತಾಕೀತು ಮಾಡಿದರು.

ಇನ್ನೊಬ್ಬ ಹಿರಿಯ ಸದಸ್ಯ ಅಬ್ದುಲ್ ರಹಿಮಾನ್ ಮಾತನಾಡಿ, ನಾವು ಹೊರಗೆ ಹೋಗಬಹುದು, ಆದರೆ ರಾಜ್ಯದಲ್ಲಿ ನಮ್ಮ ಸರ್ಕಾರವಿದೆ, ಇಲ್ಲಿ ನಮ್ಮ ಶಾಸಕರಿದ್ದಾರೆ ಎಂದು ಹೇಳಿದರು.

ಮಧ್ಯೆ ಪ್ರವೇಶ ಮಾಡಿದ ಮುಖ್ಯಾಧಿಕಾರಿ ರೇಣುಕಾ ಎಸ್.ದೇಸಾಯಿ ಅವರು ಜನರನ್ನು ಅಲೆದಾಡಿಸಬಾರದು, ಸ್ಪಂದಿಸಿ ತ್ವರಿತವಾಗಿ ಕೆಲಸ ಮಾಡಿ ಕೊಡಿ ಎಂದು ತಮ್ಮ ಸಿಬ್ಬಂದಿಗೆ ಸೂಚಿಸಿದರು.

ನಾಮನಿರ್ದೇಶಿತ ಸದಸ್ಯ ಗುಡಿನಾಗರಾಜ ಮಾತನಾಡಿ ಹೊಸ ಫೈಲುಗಳು ಬೇಗ ನಿಮ್ಮ ಚೇಂಬರಿಗೆ ಬರುತ್ತವೆ, ಹಳೆ ಫೈಲುಗಳು ಅಲ್ಲೆ ಉಳಿಯುತ್ತವೆ ಎಂದು ಮುಖ್ಯಾಧಿಕಾರಿಯವರಿಗೆ ಹೇಳಿದರು. ಮಾಜಿ ಅಧ್ಯಕ್ಷ ಮಂಜುನಾಥ ಇಜಂತಕರ್ ಹರಪನಹಳ್ಳಿ ಪಟ್ಟಣದ ಹಳೆ ಊರಿನ ಕೆಲಸ, ಕಾರ್ಯ ಮಾಡುವಾಗ ಸ್ವಲ್ಪ ವಿನಾಯಿತಿ ಇರಲಿ ಎಂದು ಸಲಹೆ ನೀಡಿದರು.

ಉದ್ದಾರ ಗಣೇಶ ಮಾತನಾಡಿ ಪಟ್ಟಣದಲ್ಲಿ ಅಕ್ರಮ ನಳಗಳು ಬಹಳಷ್ಟಿವೆ, ತೆರವು ಗೊಳಿಸಿ ಎಂದು ಕೋರಿದಾಗ ಮುಖ್ಯಾಧಿಕಾರಿ ರೇಣುಕಾ ಎಸ್. ದೇಸಾಯಿ ಅವರು ಅನಧಿಕೃತ ನಳಗಳನ್ನು ಪತ್ತೆ ಹಚ್ಚಿ ಶುಲ್ಕ ಪಾವತಿಸಿಕೊಂಡು ಅಧಿಕೃತ ಮಾಡಲಾಗುವುದು ಎಂದು ಹೇಳಿದರು.

ಲಾಟಿ ದಾದಾಪೀರ ಮಾತನಾಡಿ ನೀರಿನ ತೆರಿಗೆ ಸಾಕಷ್ಟು ಬರುತ್ತದೆ,ಹೊಸ ನಳಗಳು ಜಾಸ್ತಿಯಾಗಿವೆ,ಆ ಹಣ ಜಮಾ ಖರ್ಚಿನಲ್ಲಿ ಬಂದಿಲ್ಲ ಎಲ್ಲಿಗೆ ಹೋಗುತ್ತದೆ ಎಂದು ಪ್ರಶ್ನಿಸಿದರು. ಬೀದಿ ದೀಪಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿ ಎಂದು ಎಂ.ವಿ.ಅಂಜಿನಪ್ಪ ಒತ್ತಾಯಿಸಿ ಪಟ್ಟಣದಲ್ಲಿ ಹೊಸ ಹೈಮಾಸ್ಟ್ ಲೈಟ್ ಗಳನ್ನು ಮಂಜೂರು ಮಾಡಿಸಿದ್ದಕ್ಕಾಗಿ ಶಾಸಕರಿಗೆ ಅಭಿನಂದನೆ ಎಂದು ಹೇಳಿದರು. ಪಟ್ಟಣದ ಹರಿಹರ ವೃತ್ತದಿಂದ ಐ.ಬಿ.ವೃತ್ತದವರೆಗೆ ನಡೆದಿರುವ ಡಿವೈಡರ್ ಕಾಮಗಾರಿ ಏಕೆ ವಿಳಂಬವಾಗುತ್ತಿದೆ ಎಂದು ಅಶೋಕ ಪ್ರಶ್ನಿಸಿದರು.

ಸಹಾಯಕಆಯುಕ್ತರವಸತಿನಿಲಯದಹತ್ತಿರಇರುವ ಶಿಥಿಲ ಅವಸ್ಥೆಯಲ್ಲಿರುವ ಮೇಲ್ಮಟ್ಟದ ಜಲ ಸಂಗ್ರಹಗಾರ ವನ್ನು ತೆರವುಗೊಳಿಸಲು ಸಭೆ ಒಪ್ಪಿಗೆ ಸೂಚಿಸಿತು.

ಪುರಸಭಾ ಅಧ್ಯಕ್ಷೆ ಎಂ.ಪಾತೀಮಾಭೀ ಅಧ್ಯಕ್ಷತೆ ವಹಿಸಿದ್ದರು. ಉಪಾದ್ಯಕ್ಷ ಕೊಟ್ರೇಶ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ವೆಂಕಟೇಶ, ಮುಖ್ಯಾಧಿಕಾರಿ ರೇಣುಕಾ ಎಸ್.ದೇಸಾಯಿ, ಆರೋಗ್ಯ ನಿರೀಕ್ಷಕ ಮಂಜುನಾಥ, ಎಂಜಿನಿಯರ್ ಸಿದ್ದೇಶ್ವರ ಸಿಬ್ಬಂದಿ ಇದ್ದರು.

## ಕಂಠೀರವ ಸ್ಟುಡಿಯೋ ಅಧ್ಯಕ್ಷರ ಪ್ರವಾಸ

ದಾವಣಗೆರೆ, ಅ.30: ಶ್ರೀ ಕಂಠೀರವ ಸ್ಟುಡಿಯೋಸ್ ನಿಯಮಿತ ಅಧ್ಯಕ್ಷರಾದ ಮಹಬೂಬ್ ಪಾಷ ಅವರು ನವಂಬರ್ 1 ರಂದು ಮಧ್ಯಾಹ್ನ 1.30 ಕ್ಕೆ ದಾವಣಗೆರೆ ಆಗಮಿಸಿ ವಿವಿಧ ಕಾರ್ಯಕ್ರಮದಲ್ಲಿ ಭಾಗವಹಿಸಿ ರಾತ್ರಿ 8 ಕ್ಕೆ ಚಿತ್ರದುರ್ಗಕ್ಕೆ ಪ್ರಯಾಣಿಸುವರು.